MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 295 | ಬುಧವಾರ : 10-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 295 | WEDNESDAY : 10-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ನಿತೀಶ್ ಕೆ.



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.9–** ಜಿಲ್ಲಾದ್ಯಂತ ಸೆ.17ರಂದು ಆಚರಿಸಲ್ಪಡುವ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೆಪ್ಟೆಂಬರ್ 9ರಂದು ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಉತ್ಸವ ದಿನದ ನಿಮಿತ್ತ ಅಂದು ಬೆಳಗ್ಗೆ 8 ಗಂಟೆಗೆ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತ ಹಾಗೂ ಗಾಂಧೀಜಿಯವರ ಪುತ್ಥಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್ ಹಾಗೂ ಗಣ್ಯರು ಮಾಲಾರ್ಪಣೆ ಮಾಡಲಿದ್ದು ಈ ಎರಡು ವತ್ತಗಳ ಬಳಿಯಲ್ಲಿ ಶ್ಯಾಮಿಯಾನ ಹಾಕಬೇಕು. ಹೂವಿನಹಾರಗಳಿಂದ ಪುತ್ಥಳಿಗಳನ್ನು ಅಲಂಕೃತ ಗೊಳಿಸಬೇಕು. ಸುಣ್ಣಬಣ್ಣದ ವ್ಯವಸ್ಥೆ ಮಾಡಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು, ಪಾಲಿಕೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂದು ಬೆಳಗ್ಗೆ 9 ಗಂಟೆಗೆ ಕಲ್ಯಾಣ ಕರ್ನಾಟಕ ಉತ್ಸವದ ದಿನದ ಧ್ವಜಾರೋಹಣಕ್ಕಾಗಿ ಜಿಲ್ಲಾ ಮಹಾತ್ಮಗಾಂಧೀ ಕ್ರೀಡಾಂಗಣವನ್ನು ಸಿದ್ಧಪಡಿಸಬೇಕು. ಅಲ್ಲಿ ಶ್ಯಾಮಿಯಾನ್ ಅಳವಡಿಸಬೇಕು. ಸ್ವಾತಂತ್ರ ಹೋರಾಟಗಾರರು, ಜನಪ್ರತಿನಿಧಿಗಳು, ಗಣ್ಯರು, ಪತ್ರಕರ್ತರಿಗೆ ಪ್ರತ್ಯೇಕವಾಗಿ ಯಾವುದೇ ರೀತಿಯಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಆಸನದ ವ್ಯವಸ್ಥೆ ಮಾಡಬೇಕು. ಮೈಕಸೆಟ್ ಅಳವಡಿಸಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಧ್ವಜಾರೋಹಣ ಕಾರ್ಯಕ್ರಮ ಹಿನ್ನೆಲೆಯಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿನ ವೇದಿಕೆಯನ್ನು ಹೂಗಿಡಗಳಿಂದ ಅಲಂಕರಿಸಬೇಕು ಎಂದು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ತಿಳಿಸಲಾಯಿತು. ಜಿಲ್ಲಾ ಕ್ರೀಡಾಂಗಣದ ಪ್ರವೇಶದ್ವಾರದಲ್ಲಿ ರಂಗೋಲಿ ಹಾಕಲು ಕ್ರಮವಹಿಸಬೇಕು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಆಯಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯು ಆಯಾ ಜಿಲ್ಲಾ ಕಚೇರಿಗಳಲ್ಲಿ ಧ್ವಜಾರೋಹಣ ನೆರವೇರಿಸಿ, ಬಳಿಕ ಎಲ್ಲ ಅಧಿಕಾರಿಗಳು ಸಿಬ್ಬಂದಿಯು ಮಹಾತ್ಮಗಾಂಧೀ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಕಡ್ಡಾಯ ಹಾಜರಾಗಬೇಕು. ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಧ್ವಜಾರೋಹಣ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು **(2ನೇ ಘುಟಕ್ಕೆ)**

# 48 ಕುಟುಂಬಗಳಿಗೆ ಪುನರ್ವಸತಿ ನಿವೇಶನ ಹಕ್ಕು ಪತ್ರ ವಿತರಿಸಿದ ಶಾಸಕ ಬಸನಗೌಡ ದದ್ದಲ್



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.9–**ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಂಗಳವಾರ ರಾಯಚೂರ ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ದಿನ್ನಿ ಮತ್ತು ನೆಲಹಾಳ ಗ್ರಾಮದಲ್ಲಿ ಆಶ್ರಯ ಯೋಜನೆಯಡಿ 48 ಕುಟುಂಬಗಳಿಗೆ ಪುನರ್ವಸತಿ ನಿವೇಶನ ಹಕ್ಕಪತ್ರಗಳ ವಿತರಣೆ ಮಾಡಿದರು.

ಇದೆ ವೇಳೆ ಶಾಸಕರು, ನೆಲಹಾಳ ಗ್ರಾಮದಲ್ಲಿ ನೂತನ 2 ಶಾಲಾ ಕೊಠಡಿಗಳ ಕಾಮಗಾರಿ, ಮುಖ್ಯರಸ್ತೆಗೆ ಹೊಂದಿ ಕೊಂಡ ಸಿಸಿ ರಸ್ತೆ ಕಾಮಗಾರಿ ಜೊತೆಗೆ ಜಲಧಾರೆ ಯೋಜನೆಯ ಕಾಮಗಾರಿಗಳ ವೀಕ್ಷಣೆ ಮಾಡಿದರು. ಈ ವೇಳೆ ಶಾಸಕರು ಮಾತನಾಡಿ, ಸುಮಾರು ವರ್ಷಗಳಿಂದ ಗ್ರಾಮದ ನಿವಾಸಿಗಳು ನಿವೇಶನದ ಹಕ್ಕುಪತ್ರಗಳ ಬೇಡಿಕೆ ಇಟ್ಟಿದ್ದರು. ಗ್ರಾಮೀಣ ವಾಸಿಗಳ ಬೇಡಿಕೆಯು ನ್ಯಾಯಯುತವಾಗಿದೆ ಎಂದು ಗ್ರಾಮಸ್ಥರ ಆಶೋತ್ತರಕ್ಕೆ**(2ನೇಪುಟಕ್ಕೆ)**

# ಪತ್ರಕರ್ತರ ಉಚಿತ ಆರೋಗ್ಯ ತಪಾಸಣೆ ಶಿಬಿರ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.9–** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರು ಹಾಗೂ ಅವರ ಕುಟುಂಬ ವರ್ಗದವರಿಗೆ ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ವೈದೇಹಿ ಆಸ್ಪತ್ರೆ ಬೆಂಗಳೂರು, ಸರಕಾರಿ ಆಸ್ಪತ್ರೆ ಲಿಂಗಸುಗೂರು ಹಾಗೂ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ನಡೆದ ತಪಾಸಣಾ ಶಿಬಿರದಲ್ಲಿ ಲಿಂಗಸುಗೂರು, ಮುದಗಲ್, ಹಟ್ಟಿ ಗುರುಗುಂಟ ಸೇರಿ ತಾಲೂಕಿನ ಪತ್ರಕರ್ತರ ಹಾಗೂ ಅವರ ಕುಟುಂಬ ಸದಸ್ಯರ ಆರೋಗ್ಯ ತಪಾಸಣೆ ಜೊತೆಗೆ ಸೂಕ್ತ ಔಷದೋಪಚಾರ ನೀಡಲಾಯಿತು.

ಹೃದಯ ಸಂಬಂಧಿ ಕಾಯಿಲೆಗಳು, ಕ್ಯಾನ್ಸರ್ ತೊಂದರೆಗಳು, ನರರೋಗದ ಸಮಸ್ಯೆಗಳು, ಕಣ್ಣಿ ನ ತೊಂದರೆಗಳು, ಎಲುಬು–ಕೀಲುಗಳ ತೊಂದರೆ, ಕಿಡ್ನಿಯಲ್ಲಿ ಕಲ್ಲು, ರಕ್ತದೊತ್ತಡ, ಸಕ್ಕರೆ ಕಾ ಯಿಲೆಗಳ ತಪಾಸಣೆ ಮಾಡ ಲಾಯಿತು. ಅಗತ್ಯ ಇರುವವರಿಗೆ ಇಸಿಜಿ, 2ಡಿ ಎಕೋ, ಕಣ್ಣಿನ ಪರೀಕ್ಷೆ ನಡೆಸಿ ಸೂಕ್ತ ಚಿಕಿತ್ಸೆ ಪಡೆಯಲು ಸಲಹೆ ನೀಡಲಾಯಿತು.

ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡೂರು, ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ರುದ್ರಗೌಡ ಪೋಲಿಸ್ ಪಾಟೀಲ್, ವೈದೇಹಿ ಆಸ್ಪತ್ರೆಯ ವ್ಯವಸ್ಥಾಪಕ ಕೆ.ಮಲ್ಲಿಕಾರ್ಜುನ ಹಚ್ಚಳ್ಳಿ, ಯುರೋಲಾಜಿಸ್ಟ್ ಡಾ.ಅಲ್ಲಮಪ್ರಭು ಸಾಹುಕಾರ ಸೇರಿ ತಜ್ಞ ವೈದ್ಯರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂಧಿಗಳು, ನರ್ಸಿಂಗ್ ಕಾಲೇಜು ಪ್ರಶಿಕ್ಷಣಾರ್ಥಿಗಳು ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಉಪಾಧ್ಯಕ್ಷರಾದ ಮಹ್ಮದ್ ಖಾಜಾಹುಸೇನ್, ಹನುಮಂತ ನಾಯಕ ಮುದಗಲ್, ಪತ್ರಕರ್ತರಾದ ನಾಗರಾಜ ಮಸ್ಕಿ, ಲಕ್ಷ್ಮಣ ಬಾರಿಕೇರ್, ಶರಣಯ್ಯ ಒಡೆಯರ್, ಶಿವರಾಜ ಕೆಂಭಾವಿ, ನಾಗರಾಜ ಗೊರೆಬಾಳ, ಅಮರೇಶ ಕಲ್ಲೂರು, ರಾಘವೇಂದ್ರ ಭಜಂತ್ರಿ, ಅಮರೇಶ ಹಟ್ಟಿ ಹನುಮಂತ ಕನ್ನಾಳ, ಗಂಗಾಧರ ಗುಂತಗೋಳ, ಪಂಪಾಪತಿ, ಚಂದ್ರಶೇಖರ ನಾಯಕ, ದೇವರಾಜ, ಸಾದತಲಿ, ಪ್ರಮೋದ ಕನಕಗಿರಿ ಸೇರಿ ಇತರರು ಇದ್ದರು.

# ಸಾರಿಗೆ ನಿಗಮದ ನೌಕರರು ನಿಯಮಿತ ಆರೋಗ್ಯ ತಪಾಸಣೆ ಕೈಗೊಳ್ಳಿ: ಡಾ.ಸುರೇಂದ್ರಬಾಬು



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.9–** ಜೀವನ ಶೈಲಿ ಬದಲಾವಣೆ ಮಾಡಿಕೊಳ್ಳುವ ಮೂಲಕ ಸಂಭವನೀಯ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್ ನಂತಹ ಕಾಯಿಲೆಗಳನ್ನು ಆರಂಭದಲ್ಲಿಯೇ ಗುರುತಿಸಿ ಚಿಕಿತ್ಸೆ ಪಡೆಯುವ ಮೂಲಕ ಸದೃಢ ಆರೋಗ್ಯವನ್ನು ರೂಪಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಸುರೇಂದ್ರಬಾಬು ಹೇಳಿದರು.

ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಇವರ ಸಹಯೋಗದಲ್ಲಿ ಸೆಪ್ಟೆಂಬರ್ 9ರಂದು ನಡೆದ ಅಸಾಂಕ್ರಾಮಿಕ ರೋಗಗಳ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಅತಿಯಾದ ಕೊಬ್ಬಿನಂಶ ಪದಾರ್ಥಗಳ ಬಳಕೆ, ವ್ಯಾಯಾಮದಡೆ ನಿರಾಸಕ್ತಿ, ತಂಬಾಕು, ಆಲ್ಕೋಹಾಲ್ ನಂತಹ ಪದಾರ್ಥಗಳ ಬಳಕೆಯಿಂದ ರಕ್ತದೊತ್ತಡ, ಸಕ್ಕರೆ ಕಾಯಿಲೆಯಂತಹ ರೋಗಿಗಳ ಸಂಖ್ಯೆ ಹೆಚ್ಚುತ್ತಿದ್ದು, ಇದಕ್ಕಾಗಿ ಇಂದಿನಿಂದಲೆ ಜಾಗರೂಕರಾಗಬೇಕಿದೆ. ಅದರಲ್ಲೂ ರಸ್ತೆ ಸಾರಿಗೆ ನಿಗಮದ ನೌಕರರು ದೂರು ಪ್ರಯಾಣ, ಬಿಡುವಿಲ್ಲದ ಕೆಲಸ ನಿರ್ವಹಣೆಯಂತಹ ಕಾರ್ಯದೊತ್ತಡದಡಿ ನಿಯಮಿತವಾಗಿ ಆರೋಗ್ಯ ತಪಾಸಣೆ ಕೈಗೊಳ್ಳಲು ವಿನಂತಿಸಿದರು.

ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಘಟಕ, ರಿಮ್ಸ್ ಎನ್‌ಸಿಡಿ ವಿಭಾಗದ ಮೂಲಕ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು ಮತ್ತು ನೌಕರರಿಗೆ ವಾರದವರೆಗೆ ಜಿಲ್ಲೆಯ ಎಲ್ಲ ತಾಲೂಕು ಒಳಗೊಂಡಂತೆ 08 ಡಿಪೋಗಳು, 2 ಜಿಲ್ಲಾ ಮಟ್ಟದ ಕಚೇರಿಯಲ್ಲಿ ಕಾರ್ಯನಿರ್ವಹಿಸುವ 2510 ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಈ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ ಎಮ್.ಎಸ್. ಮಾತನಾಡಿ, ನಿಗಮದ ರಜತ ಮಹೋತ್ಸವವು ಜರುಗುತ್ತಿದ್ದು, ವಾಹನ ಚಾಲಕರು, ನಿರ್ವಾಹಕರು ಹಾಗೂ ಡಿಪೋಗಳಲ್ಲಿ ತಾಂತ್ರಿಕ ಸಿಬ್ಬಂದಿಯು ಲಕ್ಷಾಂತರ ಸಾರ್ವಜನಿಕರಿಗೆ ರಾಜ್ಯ, ಅಂತರಾಜ್ಯ ಸೇರಿದಂತೆ ಸುರಕ್ಷಿತವಾಗಿ ಅವರ ಊರುಗಳಿಗೆ ತಲುಪಿಸುವ ಮಹತ್ವಪೂರ್ಣ ಕಾರ್ಯ ಮಾಡುತ್ತಿದ್ದು, ವಾಹನಗಳ ನಿಯಮಿತ ದುರಸ್ತಿ ಕೈಗೊಳ್ಳುವ ಜೊತೆಗೆ ಆರೋಗ್ಯದ ಕಡೆಗೂ ಗಮನ ನೀಡಿ ಎಂದು ತಿಳಿಸಿದರು. ಪ್ರಸ್ತುತ ಪಾಳೆಯ ಅನುಸಾರ ತಪಾಸಣೆಗೆ ವ್ಯವಸ್ಥೆ ಮಾಡಲಾಗಿದ್ದು ಇದರ ಸದುಪಯೋಗ ಪಡೆಯಲು ಕೋರಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ ಅವರು ಪ್ರಾಸ್ತಾವಿಕ ಮಾತನಾಡಿ, ಪ್ರಸ್ತುತ ಜಿಲ್ಲೆಯ 4 ತಾಲೂಕು ಸಾರ್ವಜನಿಕ ಆಸ್ಪತ್ರೆ, 6 ಸಿಹೆಚ್‌ಸಿಗಳು, ರಿಮ್ಸ್ ಸೇರಿದಂತೆ ಒಟ್ಟು 11 ಆಸ್ಪತ್ರೆಗಳಲ್ಲಿ ಅಸಾಂಕ್ರಾಮಿಕ ರೋಗಗಳ ತಪಾಸಣೆ ಘಟಕ ಕಾರ್ಯನಿರ್ವಹಿಸುತ್ತಿದ್ದು, ಅಲ್ಲದೆ ಎಲ್ಲ ಪ್ರಾಥಮಿಕ ಅರೋಗ್ಯ ಕೇಂದ್ರಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಗ್ರಾಮೀಣ ಭಾಗದ ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ, ಸಹ ತಪಾಸಣೆ, ನಿಗಾವಣೆ ವ್ಯವಸ್ಥೆ ಕಲ್ಪಿಸಲಾಗಿದ್ದು, ಔಷಧಿಗಳನ್ನು ಗೃಹ ಆರೋಗ್ಯ ಯೋಜನೆ ಮೂಲಕ ಮನೆ ಮಟ್ಟದಲ್ಲಿ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ, ರಿಮ್ಸ್ ಎನ್‌ಸಿಡಿ ವಿಭಾಗದ ಪಿಜಿಷಿಯನ್ ಡಾ ಶ್ರೀನಿವಾಸ್, ವಿಭಾಗೀಯ ಸಂಚಾರಿ ಅಧಿಕಾರಿ ಕೆ.ಎಲ್. ಚಂದ್ರಶೇಖರ್, ಜಹೀರಾಬಾದ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಶ್ವೇತಾಂಭರಿ, ಕಾರ್ಮಿಕ ಅಧಿಕಾರಿ ಆಶ್ರಪ್ ಅಲಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಎನ್‌ಸಿಡಿ ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಡಾ.ಮೇಘಾ ರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಡಳಿತ ಅಧಿಕಾರಿ ದೇವರಾಜ್, ಸಹಾಯಕ ಉಗ್ರಾಣ ಅಧಿಕಾರಿ ಮಹಾಂತೇಶ, ಔಷಧಿ ತಜ್ಞರು ಪರ್ವತಯ್ಯ ಹಿರೇಮಠ ಸೇರಿದಂತೆ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು, ಸಿಬ್ಬಂದಿ, ಆರೋಗ್ಯ ಇಲಾಖೆಯ ತಪಾಸಣಾ ಸಿಬ್ಬಂದಿ ಉಪಸ್ಥಿತರಿದ್ದರು.

# ಹೆಣ್ಣುಭ್ರೂಣ ಹತ್ಯೆ ಶಿಕ್ಷಾರ್ಹ ಅಪರಾಧ: ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಎಚ್ಚರಿಕೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.9–**ಹೆಣ್ಣು ಭ್ರೂಣ ಹತ್ಯೆ ಮಾಡುವುದು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದೆ. ಎಲ್ಲಾ ಮಹಿಳೆಯರು ಹಾಗೂ ಸಾರ್ವಜನಿಕರು ಹೆಣ್ಣು ಭ್ರೂಣ ಹತ್ಯೆ ಮಾಡದೆ, ಹೆಣ್ಣು ಮಗುವಿನ ರಕ್ಷಣೆ ಹಾಗೂ ಆ ಮಗುವಿಗೆ ಶಿಕ್ಷಣ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಅವರು ಹೇಳಿದರು.

ಜಿಲ್ಲೆಯ ದೇವದುರ್ಗ ಪಟ್ಟಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ವಿವಿಧ ಇಲಾಖೆಯಗಳ ಸಂಯುಕ್ತಾಶ್ರಯದಲ್ಲಿ ಮಿಷನ್ ಯೋಜನೆಯಡಿ ಇತ್ತೀಚೆಗೆ ನಡೆದ ಹತ್ತು ದಿನಗಳ ವಿಶೇಷ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ **(2ನೇಪುಟಕ್ಕೆ)**

# ಅ.3 ರಂದು ಕಲ್ಮಠ ವತಿಯಿಂದ ಉಚಿತ ಅಯ್ಯಾಚಾರ ದೀಕ್ಷೆ ಹಾಗೂ ಲಿಂಗದೀಕ್ಷೆ ಕಾರ್ಯಕ್ರಮ: ಕಲ್ಮಠ ಶ್ರೀ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.9–**ಪಟ್ಟಣದ ಕಲ್ಮಠದಲ್ಲಿ ನಡೆಯುವ ಸುವರ್ಣ ದಸಾರ ಮಹೋತ್ಸವ ಅಂಗವಾಗಿ ಅ.3 ಮತ್ತು 4 ರಂದು ಎರಡುದಿನಗಳ ಕಾಲ ಕಲ್ಮಠದಲ್ಲಿ ನಡೆಯುವ ಶ್ರೀ ಶೈಲ ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳವರ ಇಷ್ಟಲಿಂಗ ಮಹಾಪೂಜೆ ಕಾರ್ಯಕ್ರಮದಲ್ಲಿ ಶ್ರೀ ಶ್ರೀಶೈಲಜಗದ್ಗುರುಗಳವರ ದಿವ್ಯ ಸಾನಿಧ್ಯದಲ್ಲಿ ಆಸಕ್ತ ಜಂಗಮವಟುಗಳಿಗೆ ಉಚಿತವಾಗಿ ಅಯ್ಯಾಚಾರ ದೀಕ್ಷೆ ಹಾಗೂ ಎಲ್ಲಾ ಸಮುದಾಯದವರಿಗೆ ಲಿಂಗದೀಕ್ಷೆ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಆಸಕ್ತರು ತಮ್ಮ ಹೆಸರು ಗಳನ್ನು ನೊಂದಾಯಿಸುವುದಕ್ಕೆ ಜಂಗಮ ಸಮಾಜದ ಹಿರಿಯರಾದ ಕಿಡಿಗಂಣಯದದ್ಯಸ್ವಾಮಿ ದೂ.ಸಂಖ್ಯೆ 9980868058 ಹಾಗೂ ಎಸ್.ಎಸ್. ಪಾಟೀಲ್ ದೂ.ಸಂಖ್ಯೆ 944969 0136 ಗೆ ಸಂಪರ್ಕಿಸುವಂತೆ ಕಲ್ಮಠ ಶ್ರೀ ವಿರೂ ಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇಯ ಪುಟದಿಂದ

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ನಿತೀಶ್ ಕೆ.

ಸೂಚನೆ ನೀಡಿದರು. ಜಿಲ್ಲಾ ಉಸ್ತುವಾರಿ ಸಚಿವರ ಭಾಷಣ ಸಿದ್ಧಪಡಿಸಲು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸೂಚಿಸಲಾಯಿತು. ಧ್ವಜಾರೋಹಣದ ಬಳಿಕ ಸಚಿವರು ಪತ್ರಿಕಾಗೋಷ್ಠಿ ನಡೆಸಲಿದ್ದು, ಇದಕ್ಕೆ ಅಗತ್ಯ ಏರ್ಪಾಡು ಮಾಡಬೇಕು ಎಂದು ರಾಯಚೂರ ತಹಸೀಲ್ದಾರಗಳಿಗೆ ತಿಳಿಸಲಾಯಿತು.

ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳು ಮತ್ತು ವಿವಿಧ ತುಕಡಿಗಳಿಂದ ನಡೆಯುವ ಪಥಸಂಚಲನದ ಪೂರ್ವ ಸಿದ್ಧತೆಯು ಸೆಪ್ಟೆಂಬರ್ 13 ರಿಂದ ಸೆಪ್ಟೆಂಬರ್ 15ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಅಭ್ಯಾಸಕ್ಕೆ ಆಗಮಿಸುವ ವಿದ್ಯಾರ್ಥಿಗಳು, ಪೊಲೀಸ್, ಗೃಹರಕ್ಷಕ ದಳ ಸೇರಿದಂತೆ ಇನ್ನಿತರ ಸಿಬ್ಬಂದಿಗೆ ಉಪಹಾರ, ಚಹಾ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಪಾಲಿಕೆ, ಆರ್‌ಟಿಓ ಮತ್ತು ಜಿಲ್ಲಾ ನೋಂದಣಿ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಎರಡನೇ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಡಿವೈಎಸ್ಪಿ ಪರಮಾನಂದ, ರಾಯಚೂರು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ ಬಿರಾದಾರ, ಸೇವಾದಳ ವಿದ್ಯಾಸಾಗರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಹೆಣ್ಣುಭ್ರೂಣ ಹತ್ಯೆ ಶಿಕ್ಷಾರ್ಹ ಅಪರಾಧ: ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಎಚ್ಚರಿಕೆ

ನೀಡಿ ಅವರು ಮಾತನಾಡಿದರು. ಗರ್ಭ ಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರ (ದುರ್ಬಳಕೆ ಮತ್ತು ತಡೆ) (ಪಿಸಿಪಿಎನ್‌ಡಿಟಿ-1994)ರ ಕಾಯ್ದೆಯ ಪ್ರಕಾರ ಕಠಿಣ ಶಿಕ್ಷೆ ಇದೆ. ಸ್ವತಃ ಗರ್ಭಿಣಿ ಆಕೆಯ ಗಂಡ, ಅತ್ತೆ, ಮಾವ ಅಥವಾ ಇತರೆ ಸಂಬಂಧಿಕರಿಗೆ ಮೊದಲ ಅಪರಾಧಕ್ಕೆ 3 ವರ್ಷ ಜೈಲು ಹಾಗೂ 2ನೇ ಅಪರಾಧಕ್ಕೆ 5 ವರ್ಷ ಜೈಲು ಜೊತೆಗೆ 1,00,000 ರೂ.ಗಳ ದಂಡ ವಿಧಿಸಲಾಗುತ್ತದೆ.

ಹೆಣ್ಣುಭ್ರೂಣ ಹತ್ಯೆಗೆ ಸಹಕಾರ ನೀಡುವ ವೈದ್ಯರಿಗೆ 3 ವರ್ಷ ಜೈಲು ಜೊತೆಗೆ 10,000 ರೂ.ಗಳ ದಂಡ ಹಾಗೂ ರಾಜ್ಯ ವೈದ್ಯಕೀಯ ಮಂಡಳಿಯಿಂದ ಅವರ ಹೆಸರನ್ನು 5 ವರ್ಷಗಳವರೆಗೆ ತೆಗೆದು ಹಾಕುವ ಕಾನೂನು ಇದೆ. 2ನೇ ಅಪರಾಧಕ್ಕೆ 5 ವರ್ಷ ಜೈಲು ಜೊತೆಗೆ 50,000 ರೂ.ಗಳ ದಂಡ ಹಾಗೂ ಅಂತಹ ವೈದ್ಯರನ್ನು ಶಾಶ್ವತವಾಗಿ ವೈದ್ಯಕೀಯ ಮಂಡಳಿಯಿಂದ ಹೆಸರು ತೆಗೆದು ಹಾಕುವ ಕಠಿಣವಾದ ಕಾನೂನು ಇದೆ ಎಂದು ಎಚ್ಚರಿಕೆ ನೀಡಿದರು.

ಸಾರ್ವಜನಿಕರು, ಗಂಡು-ಹೆಣ್ಣು ಎನ್ನುವ ಬೇಧ-ಭಾವ ಮಾಡದೇ ಇಬ್ಬರು ಸಮಾನರು ಎಂದು ನಾವೆಲ್ಲರೂ ತಿಳಿಯಬೇಕು. ಹೆಣ್ಣು ಭ್ರೂಣ ಹತ್ಯೆಯಂತಹ ಕೃತ್ಯಕ್ಕೆ ಇಳಿಯದೇ ಹೆಣ್ಣು ಮಕ್ಕಳ ಉಳಿವಿಗೆ ಮತ್ತು ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಮಿಷನ್‌ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಸೇರಿದಂತೆ ದೇವದುರ್ಗ ತಾಲೂಕಿನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಇದ್ದರು.

# 48 ಕುಟುಂಬಗಳಿಗೆ ಪುನರ್ವಸತಿ ನಿವೇಶನ ಹಕ್ಕು ಪತ್ರ ವಿತರಿಸಿದ ಶಾಸಕ ಬಸನಗೌಡ ದದ್ದಲ್

ಸ್ಪಂದಿಸಿ ಕುಟುಂಬಗಳಿಗೆ ಹಕ್ಕು ಪತ್ರ ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು. ಗ್ರಾಮಗಳ ಅಭಿವೃದ್ಧಿಗೆ ಬದ್ಧ: ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ಪ್ರತಿಯೊಂದು ಹಳ್ಳಿಗಳಿಗು ಕುಡಿಯುವ ನೀರು, ಬೀದಿ ದೀಪ, ಸಾರಿಗೆಯಂತಹ ಎಲ್ಲಾ ಬಗೆಯ ಮೂಲಭೂತ ಸೌಕರ್ಯ ಸಿಗಬೇಕಿದೆ. ಈ ದಿಶೆಯಲ್ಲಿ ತಾವು ಯೋಜಿಸಿ ಕಾರ್ಯಪ್ರವೃತ್ತವಾಗಿದ್ದು ತಮ್ಮ ಕ್ಷೇತ್ರದ ಪ್ರತಿಯೊಂದು ಹಳ್ಳಿಯ ಅಭಿವೃದ್ಧಿಗೆ ಬದ್ಧರಾಗಿರುವುದಾಗಿ ಇದೆ ವೇಳೆ ಶಾಸಕರು ತಿಳಿಸಿದರು.

ಈ ಸಂದರ್ಭದಲ್ಲಿ ಗಿಲ್ಲೇಸೂಗುರ ಬ್ಲಾಕ್ ಅಧ್ಯಕ್ಷರು, ಗ್ರಾಮದ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು ಮತ್ತು ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಾನಸಿಕ ಸಮತೋಲಕ್ಕಾಗಿ ಪಠ್ಯದ ಜೊತೆಗೆ ಆಟ ಅಗತ್ಯ : ಸಚಿವ ಖಂಡ್ರೆ



**ಭಾಲ್ಕಿ,ಸೆ.9-** ಸರ್ವಾಂಗೀಣ ವಿಕಾಸಕ್ಕಾಗಿ ಮತ್ತು ಮಾನಸಿಕ ಸಮತೋಲಕ್ಕಾಗಿ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಆಟಗಳಲ್ಲಿ ಭಾಗವಹಿಸುವುದು ಅಗತ್ಯ ಎಂದು ಅರಣ್ಯ,ಪರಿಸರ ಜೀವಿಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ ಬೀದರ,ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ ಹಾಗೂ ಶ್ರೀ ಸಂಗಮೇಶ್ವರ ಪಪೂ ಕಾಲೇಜು ಭಾಲ್ಕಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 2025-26 ನೇ ಸಾಲಿನ ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಅಂದಿನ ಕಾಲಕ್ಕಿಂತ ಇಂದಿನ ಕಾಲದಲ್ಲಿ ಕ್ರೀಡೆಗಳಿಗೆ ಹೆಚ್ಚಿನ ಮಹತ್ವ ದೊರೆಯುತ್ತಿದೆ.ಕೃತ್ರಿಮ ಬುದ್ದಿಮತೆ (ಎಆಯ್)ಓದುವಿಕೆ ಕುಗ್ಗಿಸುತ್ತಿದೆ.ಯುವ ಶಕ್ತಿ ಅಣು ಶಕ್ತಿಗಿಂತ ಬಲಿಷ್ಠವಾಗಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ದೇಶದ ಕೀರ್ತಿ ಹೆಚ್ಚಿಸಲು ಯುವಕರು ವಿವಿಧ ಕ್ರೀಡೆಗಳಲ್ಲಿ ಆಸಕ್ತಿಯಿಂದ ಭಾಗವಹಿಸಬೇಕು.ಸೋಲೇ ಗೆಲುವಿನ ಸೋಪಾನವಾಗಿರುತ್ತದೆ.ಯುವಕರು ದುಶ್ಚಟ-ದುರ್ಗುಣಗಳಿಂದ ದೂರವಿದ್ದು ಆದರ್ಶ ಜೀವನ ರೂಪಿಸಿ ಕೊಳ್ಳಬೇಕು.ಪರಿಸರ ಮಾಲಿನ್ಯ ತಡಗಟ್ಟಲು ಗಿಡ-ಮರ ಬೆಳೆಸುವುದು ಅಗತ್ಯ ಎಂದು ಹೇಳಿದರು.

ಶ್ರೀ ಮಹಾಲಿಂಗ ದೇವರು ಸಾನಿಧ್ಯ ವಹಿಸಿದ್ದರು.

ಡಿಡಿಪಿಯು ಚಂದ್ರಕಾಂತ ಶಾಹಾಬಾದಕರ್ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಹಿರೇಮಠ ವಿದ್ಯಾಪೀಠದ ಆಡಳಿತಾಧಿಕಾರಿ ಮೋಹನರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಪುರಸಭೆ ಅಧ್ಯಕ್ಷ ಶಶಿಕಲಾ ಅಶೋಕ ,ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೊಡೆ, ತಾಲೂಕು ಅಧ್ಯಕ್ಷ ಹಣಮಂತರಾವ ಚವ್ಹಾಣ, ಡಿಎಸ್ಪಿ ಶಿವಾನಂದ ಪಾಡಶೆಟ್ಟಿ,ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ ಕೋಸಂಬೆ,ಉದ್ಯಮಿ ವಿಲಾಸ ಬಕ್ಕಾ, ಧನರಾಜ ಬಂಬಳಗೆ, ಪ್ರಾಚಾರ್ಯರಾದ ಜೈಕಾಂತ ಗಂಗೋಜಿ,ಸುಖದೇವ ಬಿರಾದಾರ, ಬಾಲಾಜಿ ವಾಡೆಕರ್ ಸೇರಿದಂತೆ ಕ್ರೀಡಾಪಟುಗಳು ಉಪಸ್ಥಿತರಿದ್ದರು. ಗುರುಕುಲ ಪಿಯು ಕಾಲೇಜು ಪ್ರಾಚಾರ್ಯ ಬಸವರಾಜ ಮೋಳಕಿರೆ ಪ್ರಾಸ್ತಾವಿಕ ಮಾತನಾಡಿದರು. ಶ್ರೀ ಸಂಗಮೇಶ್ವರ ಪಪೂ ಕಾಲೇಜು ಪ್ರಾಚಾರ್ಯ ಪ್ರವೀಣ ಹಿರೇಮಠ ಸ್ವಾಗತಿಸಿದರು. ಮದನ ಗಾಂವಕರ್ ನಿರೂಪಿಸಿದರು.ದೈಹಿಕ ಶಿಕ್ಷಕ ಅನೀಲ ಪಾಟೀಲ್ ವಂದಿಸಿದರು.

# ಬಿ.ಬಿ.ಪಾಟೀಲ್ ಕಾಲೋನಿ ಗಣಪನಿಗೆ ವಾದ್ಯಮೇಳಗಳೊಂದಿಗೆ ಅದ್ದೂರಿ ವಿಸರ್ಜನೆ

ಯುವ ಮಾರ್ಗ ಸುದ್ದಿ




**ಸಿರವಾರ, ಸೆ.08-**ಪಟ್ಟಣದ ಬಿ.ಬಿ. ಪಾಟೀಲ್ ಕಾಲೋನಿಯಲ್ಲಿ ವಿಘ್ನ ವಿನಾಶಕನ ಯೂತ್ ಅಸೋಸಿಯೇಷನ್ ಸಮಿತಿಯಿಂದ ಪ್ರತಿಷ್ಠಾನೆ ಮಾಡಲಾಗಿದ್ದ ಗಣೇಶನಿಗೆ ಸೋಮವಾರ ಸಂಜೆ ನಾಸೀಕ್‌ನಿಂದ ಕರೆಸಲಾಗಿದ್ದ ವಾದ್ಯ ಮೇಳಗಳ ತಂಡದಿಂದ ಸಾರ್ವಜನಿಕರಿಗೆ ಮನರಂಜಿಸುವ ಮೂಲಕ ಅತ್ಯಂತ ಅದ್ದೂರಿಯಾಗಿ ಹಾಗೂ ಡಿಜೆ ಇಲ್ಲದೆ ವಿಶೇಷವಾಗಿ ವಿಸರ್ಜನೆ ನೆರವೇರಿಸಲಾಗಿಯಿತು.

ಡೊಳ್ಳು ವಾದ್ಯಗಳ ಮೆರವಣೆಯನ್ನು ನೋಡಲು ಸಾವಿರಾರು ಜನ ನೆರೆದಿದ್ದು ವಿಶೇಷವೆನಿಸಿತು.

ಡಿಜೆಗೆ ಹಣ ವ್ಯರ್ಥ ಮಾಡದೇ ಸರ್ವರೂ ಸಮಾದಾನದಿಂದ ನೋಡುವ ವಾದ್ಯ ಮೇಳಗಳನ್ನು ತಂದು ಮನರಂಜಿಸುವಂತೆ ಮಾಡಿದ ಗಣೇಶ ಆಯೋಜನೆಯ ಸಮಿತಿಯವರಿಗೆ ಸಾರ್ವಜನಿಕರಿಂದ ಪ್ರಶಂಸೆ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಅಧ್ಯಕ್ಷ ವೈ.ಭೂಪನಗೌಡ, ಮಾಜಿ ತಾ.ಪಂ. ಅಧ್ಯಕ್ಷ ದಾನನಗೌಡ, ಬಿಜೆಪಿ ಯುವ ಮುಖಂಡರಾದ ಶಿವಶರಣಗೌಡ ಪಾಟೀಲ್ ಲಕ್ಕಮದಿನ್ನಿ, ಜೆ.ಶಿವರಾಮರೆಡ್ಡಿ, ಚನ್ನಪ್ಪ ಸಾಹುಕಾರ ನಾಗೋಲಿ, ಜೆ.ವೀರೇಶ ಸಾಹುಕಾರ್, ನಾಗಪ್ಪ ಪತ್ತಾರ್, ಶ್ರೀಧರಸ್ವಾಮಿ, ಲಕ್ಷ್ಮೀಕಾಂತ, ಮಲ್ಲಿಕಾರ್ಜುನಗೌಡ ಮರಕಂದಿನ್ನಿ, ಮಲ್ಲಿಕಾರ್ಜುನ ಹೂಗಾರ್, ಜಿ.ಅನಿಲಕುಮಾರ್, ಪ್ರಕಾಶ ಮಾಡಗಿರಿ, ಸಿದ್ದನಗೌಡ ಕುರುಕುಂದಾ, ಬಸವರಾಜ ಸ್ವಾಮಿ, ಸುರೇಶ ನಾಗೋಲಿ, ಅಯ್ಯನಗೌಡ ಕುರುಕುಂದಾ, ಚನ್ನವೀರಯ್ಯ ಸ್ವಾಮಿ ಸೇರಿದಂತೆ ಸಾವಿರಾರು ಜನರು ಇದ್ದರು.

# ಗರ್ಭಿಣಿ ಬಾಣಂತಿಯರಿಗೆ ಪೌಷ್ಟಿಕ ಆಹಾರ ವಿತರಣೆ ಪೌಷ್ಠಿಕ ಆಹಾರ ಸೇವಿಸಿ ಆರೋಗ್ಯವಂತರಾಗಿ-ಮೌಲಾಸಾಬ ವರ್ಚಸ್

ಯುವ ಮಾರ್ಗ ಸುದ್ದಿ

**ಸಿರವಾರ, ಸೆ.9-**ಅಪೌಷ್ಟಿಕತೆ ಹೊಗಲಾಡಿಸಲು ಸರ್ಕಾರ ಅಂಗವಾಡಿ ಕೇಂದ್ರಗಳ ಮೂಲಕ ಪೌಷ್ಠಿಕ ಆಹಾರ ನೀಡುತ್ತಿದೆ ಅದನ್ನು ಸೇವನೆ ಮಾಡಿ ಪ.ಪಂಚಾಯತಿ ವಾರ್ಡ ನಂ 16 ಎಂದು ಸದಸ್ಯ ಮೌಲಾಸಾಬ ವರ್ಚಸ್ ಹೇಳಿದರು.

ಪಟ್ಟಣದ ಲ್ಲಿರುವ ಅಂಗನವಾಡಿ ಕೇಂದ್ರ ಸಂಖ್ಯೆ 01-03 ರಲ್ಲಿ ಚಿಕ್ಕ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ವಿತರಣೆ ಮಾಡಿ ಮಾತನಾಡಿದ ಅವರು ಅಪೌಷ್ಠಿಕತೆ ಹೋಗಲಾಡಿಸಲು, ಖನಿಜಾಂಶಯುಕ್ತ ಆಹಾರ, ಕಾಳು ಇನ್ನಿತರ ಪದಾರ್ಥಗಳನ್ನು ಸರ್ಕಾರ ಗರ್ಬಿಣಿ ಬಾಣಂತಿಯರಿಗೆ

ಸಂದರ್ಭದಲ್ಲಿ ಅಂಗನವಾಡಿ ಉಚಿತವಾಗಿ ನೀಡುತ್ತಿದೆ. ಅದನ್ನು



ಸರಿಯಾಗಿ ವಿತರಣೆ ಮಾಡಬೇಕು. ಪಲಾನುಭವಿಗಳು ಸಹ ಕೇಳಿ ಪಡೆದುಕೊಳಬೇಕು. ಪದಾರ್ಥಗಳನ್ನು ಕಾಳಸಂತೆಯಲ್ಲಿ ಮರಾಟ ಮಾಡಬಾರದು ಎಂದರು. ಈ ಕಾರ್ಯಕರ್ತೆ ಶೈಲಜಾ, ಮಹೇಶ್ವರಿ ಸೇರಿದಂತೆ ಇನ್ನಿತರರು ಇದರು.

# ಕ್ರೀಡೆ ಎಂಬುದು ಮನೋರಂಜನೆಯ ಜೊತೆಗೆ ಗುರಿಯ ಕಡೆಗೆ ಸಾಗುವಂತೆ ಪ್ರೇರೇಪಿಸುತ್ತದೆ; ಸಂತೋಷ ಚೌವ್ಹಾಣ

**ಚಿಂಚೋಳಿ ಸೆ.9-**ಕ್ರೀಡೆ ಎಂಬುವುದು ಕೇವಲ ಮನೋರಂಜನೆಯಷ್ಟೇ ಅಲ್ಲದೇ ಅದು ಗುರಿಯ ಕಡೆಗೆ ಪ್ರೇರೇಪಿಸುತ್ತದೆ ಎಂದು ತಾಲ್ಲೂಕು ಪಂಚಾಯತನ ಪ್ರಭಾರಿ ಕಾರ್ಯ ನಿರ್ವಾಹಕ ಅಧಿಕಾರಿ ಸಂತೋಷ ಚೌವ್ಹಾಣ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲ್ಲೂಕಿನ ಚಂದಾಪುರ ಪಟ್ಟಣದ ಹೊರವಲಯದಲ್ಲಿನ ತಾಲ್ಲೂಕು ಕ್ರೀಡಾಂಗಣ ಪ್ರೋಲಕಪಳ್ಳಿಯಲ್ಲಿ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆಯಿಂದ ಮನೋರಂಜನೆ ಒಂದೆಡೆಯಾದರೆ ಮತ್ತೊಂದೆಡೆ ಸ್ಪರ್ಧಾರ್ಥಿಗಳಲ್ಲಿ ಗೆಲ್ಲುವ ತವಕ,ಛಲ ಹಾಗೂ ಹುಮ್ಮಸ್ಸುಗಳನ್ನು ಹುಟ್ಟಿಸುತ್ತದೆ. ಕ್ರೀಡೆ ಇಲ್ಲದ ಜೀವನ ಕೀಟ ತಿಂದಂತಹ ಹಣ್ಣಿನಂತೆ. ಕ್ರೀಡೆ ಎಂಬುದು ಪ್ರತಿಯೊಬ್ಬ ವ್ಯಕ್ತಿಗೂ ಅತ್ಯವಶ್ಯಕ. ಅದು ದೈಹಿಕವಾಗಿಯೂ,ಮಾನಸಿಕವಾಗಿಯೂ ಆತ್ಮಸ್ಥೈರ್ಯವನ್ನು ನೀಡುತ್ತದೆ. ವಿದ್ಯಾರ್ಥಿಗಳು ಓದಿನ ಜೊತೆ ಜೊತೆಗೆ ಕ್ರೀಡೆಗೂ ಕೂಡ ಮಹತ್ವವನ್ನು ನೀಡಬೇಕು. ಇಂದು ಹಿಂದೆಂದಿಗಿಂತಲೂ ಹೆಚ್ಚಾಗಿ ಕ್ರೀಡೆಗಳಿಗೆ ವ್ಯಾಪ್ತಿ, ಮನ್ನಣೆ ದೊರೆಯುತ್ತಿದೆ.ಅವಕಾಶಗಳು ಕೂಡ ಹೆಚ್ಚಾಗಿವೆ. ಕ್ರೀಡಾ ಲೋಕ ವಿಶೇಷವಾಗಿ ಅನಾವರಣಗೊಳ್ಳುತ್ತಿದೆ. ಎಲ್ಲರ ಮೆಚ್ಚುಗೆಗೆ ಪಾತ್ರಗೊಂಡು ಹೆಚ್ಚಿನ ಅವಕಾಶಗಳನ್ನು ನೀಡುತ್ತಿವೆ.ಇಂತಹ ಅವಕಾಶಗಳನ್ನು ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಂಡು ಆಸಕ್ತಿಯಿಂದ ಶ್ರಮ ಪಟ್ಟು ಛಲದಿಂದ ಕ್ರೀಡೆಯಲ್ಲಿ ಭಾಗವಹಿಸಬೇಕು ಅಲ್ಲದೇ ಕೇವಲ ತಾಲ್ಲೂಕು,ಜಿಲ್ಲಾ ಮಟ್ಟದಲ್ಲಿಯಷ್ಟೇ ಅಲ್ಲದೆ ರಾಜ್ಯ ರಾಷ್ಟ್ರ ಮಟ್ಟದಲ್ಲಿಯೂ ಕೂಡ ಸಾಧನೆ ಮಾಡುವ ನಿಟ್ಟಿನಲ್ಲಿ ಮುಂದಾಗಬೇಕೆಂದು ಸ್ಪರ್ಧಾರ್ಥಿಗಳಿಗೆ ಶುಭ ಹಾರೈಸಿದರು. ಬಳಿಕ ಕ್ಷೇತ್ರ ಶಿಕ್ಷಣಾಧಿಕಾರಿ ವಿ.



ಲಕ್ಷ್ಮಯ್ಯ ಮಾತನಾಡಿ, ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತದೆ. ವಿದ್ಯಾರ್ಥಿಗಳು ಪಾಠದ ಜೊತೆ ಜೊತೆಗೆ ಆಟಕ್ಕೂ ಪ್ರಾಮುಖ್ಯತೆ ನೀಡಬೇಕು. ತಮಗಿಷ್ಟವಾದ ಕ್ರೀಡೆಗಳಲ್ಲಿ ಸಾಧನೆ ಮಾಡಿದವರು ಇಂದು ಹಲವಾರು ಜನ ರಾಜ್ಯಕ್ಕೆ,ರಾಷ್ಟ್ರಕ್ಕೆ ಕೀರ್ತಿಯನ್ನು ತಂದಿದ್ದಾರೆ ಎಂದರು. ತದನಂತರ ಕ್ರೀಡಾ ಜ್ಯೋತಿಯನ್ನು ಬೆಳಗಿಸುವ ಮೂಲಕ ಕ್ರೀಡೆಗೆ ಚಾಲನೆಯನ್ನು ನೀಡಲಾಯಿತು. ಈ ಸಂದರ್ಭದಲ್ಲಿ

ದೇವೇಂದ್ರಪ್ಪ ಹೋಳ್ಕರ, ನಾಗಶೆಟ್ಟಿ ಬದ್ರಶೆಟ್ಟಿ, ಜಯಪ್ಪ ಚಾಪಲ, ನಾರಾಯಣ ರೆಡ್ಡಿ, ಮಲ್ಲಿಕಾರ್ಜುನ ಪಾಲಾಮೂರ,ರಾಜು ಮುಸ್ತರಿ, ಮಾರುತಿ ಪತಂಗೆ,ಖುರ್ಶಿದ ಮಿಯಾ, ಸುರೇಶ ಕೊರವಿ, ಅಶೋಕ ಹೂವಿನಬಾವಿ, ಶಾಮರಾವ ಮೊಘಾ, ಪಾಂಡುರಂಗ ದೈಹಿಕ ಶಿಕ್ಷಕರುಗಳಾದ,

ಮಲ್ಲಿಕಾರ್ಜುನ ನೆಲ್ಲಿ, ಗೋವಿಂದ, ಮಲ್ಲಿಕಾರ್ಜುನ, ಶಶಿ, ರೇವಣಸಿದ್ದ, ಹಾಶಪ್ಪ, ಮಾಹದೇವ, ರೂಪಶ್ರೀ, ನಾಗರತ್ನ, ಸುಜಾತ ತ್ರಿಪಾಠಿ, ಮಹಮ್ಮದ್ ಪಟೇಲ, ಚಾಂದ, ಸಂಜೀವ, ಮರೆಪ್ಪ, ಗಾಳಪ್ಪ ಉಪಸ್ಥಿತರಿದ್ದರು.

# ಸಾಂಸ್ಕೃತಿಕ ಒಗ್ಗಟ್ಟಿನ ಬದುಕು ನಮ್ಮದಾಗುವುದು: ಸಿಪಿಐ ಶ್ರೀಕಾಂತ ಅಲ್ಲಾಪುರೆ

**ಕಮಲನಗರ,ಸೆ.9-**ವಾರ್ಷಿಕವಾಗಿ ಬರುವ ಗಣೇಶ ಚತುರ್ಥಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಬೇಕು. ಇದರಿಂದ ಮನಸ್ಸಿಗೆ ನೆಮ್ಮದಿ ಮತ್ತು ಸಾಂಸ್ಕೃತಿಕ ಒಗ್ಗಟ್ಟಿನ ಬದುಕು ನಮ್ಮದಾಗುವುದು ಎಂದು ಕಮಲನಗರದ ಸಿಪಿಐ ಶ್ರೀಕಾಂತ ಅಲ್ಲಾಪುರೆ ಹೇಳಿದರು.



ಪಟ್ಟಣದ ಶಾಸ್ತ್ರೀ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ನಡೆಯುತ್ತಿರುವ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಈಚೆಗೆ ಏರ್‌ಪಡಿಸಿದ್ಧ 16ನೇ ಗಣೇಶ ವಾರ್ಷಿಕೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಸ್ಥೆಯಿಂದ ಶಿಕ್ಷಣದ ಜೊತೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚಿನ ಆದ್ಯತೆ ನೀಡಿ ಪೂರಕ ವ್ಯವಸ್ಥೆ ಏರ್ಪಡಿಸಿರುವುದು ಹೆಮ್ಮೆಯ ವಿಷಯ ಎಂದರು.

ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಡಾ. ಅಜಿತ ಕುಮಾರ ಶಾಸ್ತ್ರೀ ಮಾರ್ಗದರ್ಶನದಲ್ಲಿ ಶೈಕ್ಷಣಿಕ ಪ್ರಗತಿಗೆ ಪೂರಕವಾದ ವ್ಯವಸ್ಥೆಗಳನ್ನು ನಿರ್ಮಿಸಿದ್ದು ಪಠ್ಯ ಮತ್ತು ಪಠ್ಯೇತರ ಚಟುವಟಿಕಗಳನ್ನು ನಿರ್ವಹಿಸುತ್ತಿದ್ದು ಪಾಲಕರ ಮೆಚ್ಚುಗುಗೆಗೆ ಪಾತ್ರವಾಗಿದೆ ಎಂದು ಬಣ್ಣಿಸಿದರು.ಎನ್‌ಸಿ ರಾಜಕುಮಾರ ಸೋನಾರೆ, ಪಿಸಿ ಮಹಾದೇವ ಬಿರಾದಾರ, ಶಿಕ್ಷಕ ಸಿಬ್ಬಂದಿ ಶ್ರೀದೇವಿ ಸೋನಕಾಂಬಳೆ, ದೀಪ ಮಾಲಾ ಸೂರ್ಯವಂಶಿ, ಸಂಗೀತಾ ಕಾಂಬಳೆ, ರಾಜಶ್ರೀ ಸಿರಗಿರೆ, ಶೀತಲ ನಂದುಕುಮಾರ, ಅಂಜಲಿ ಕಾಂಬಳೆ, ಅಂಬಿಕಾ ಗಾಯ ಕವಾಡ್, ಮಲ್ಲಿಕಾರ್ಜುನ ಮೇತ್ರೆ ಮತ್ತು ಶಾಲೆಯ ಸಿಬ್ಬಂದಿ ಹಾಗೂ ಮಕ್ಕಳು ಮಯೂರ, ರೋಶನಿ, ಪ್ರಗತಿ, ಸೋನಿ, ಪ್ರಿನ್ಸ್, ಅಭಿಜಿತ, ಅಥರ್ವ, ರುದ್ರ, ದೀಪಿಕಾ ಮೊದಲಾದವ ರಿದ್ದರು.

# ಪಂಜಾಬ್ ಪ್ರವಾಹ ಪೀಡಿತರಿಗೆ 11 ಲಕ್ಷ ದೇಣಿಗೆ

**ಬೀದರ:.9–** ಬೀದರನ ಶ್ರೀ ನಾನಕ ಝಿರಾ ಸಾಹೇಬ್ ಪ್ರಬಂಧಕ ಕಮಿಟಿ ಹಾಗೂ ಗುರು ನಾನಕ ಶಿಕ್ಷಣ ಸಂಸ್ಥೆಗಳ ಸಮೂಹದಿಂದ ಪಂಜಾಬ್ ಪ್ರವಾಹ ಪೀಡಿತರಿಗೆ ಪರಿಹಾರ ನಿಧಿಯಾಗಿ 11 ಲಕ್ಷ ರೂಪಾಯಿ ಚೆಕ್‌ನ್ನು ದೇಣಿಗೆ ರೂಪದಲ್ಲಿ ನೀಡಲಾಯಿತು.

ಈ ಚೆಕ್ಕನ್ನು ನಾಂದೇಡಿನ ಸಿಂಗ್ ಸಾಹೇಬ್ ಭಾಯಿ ರಾಮಸಿಂಗ್ ಧುಪಿಯಾ ತಖ್ತ ಸಚ್ಚಖಂಡ ಹಜೂರ ಸಾಹೇಬ್, ಹಾಗೂ ಸಂತ್ ಬಾಬಾ ನರೇಂದ್ರಸಿಂಗ್ ಜತ್ತೇದಾರ ಮತ್ತು ಸಂತ್ ಬಾಬಾ ಬಲ್ವಿಂದರ್ ಸಿಂಗ್ ಗುರುದ್ವಾರಾ ಲಂಗರ್ ಸಾಹೇಬ್ ನಾಂದೇಡ್ ಇವರ ಸಮ್ಮುಖದಲ್ಲಿ ಬೀದರ ಗುರುದ್ವಾರಾ ಶ್ರೀ ನಾನಕ ಝಿರಾ ಸಾಹೇಬ್ ಅಧ್ಯಕ್ಷರಾದ ಡಾ. ಎಸ್.ಬಲಬೀರಸಿಂಗ್ ಅವರು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮನಪ್ರಿತ್‌ಸಿಂಗ್ ಖನುಜಾ, ಪುನೀತ್ ಸಿಂಗ್ ಉಪಸ್ಥಿತರಿದ್ದರು.

# ನೇಪಾಳ ಪ್ರಧಾನಿ ಕೆ.ಪಿ.ಶರ್ಮಾ ಓಲಿ ರಾಜೀನಾಮೆ



**ಕಠ್ಮಂಡು,ಸೆ.9–**ನೇಪಾಳ ಸರ್ಕಾರದ ವಿರುದ್ಧ ಹಿಂಸಾತ್ಮಕ ಪ್ರತಿಭಟನೆಗಳು ಮುಂದುವರಿದ ಹಿನ್ನಲೆ ನೇಪಾಳ ಪ್ರಧಾನಿ ಕೆ.ಪಿ.ಶರ್ಮಾ ಓಲಿ ರಾಜೀನಾಮೆ ನೀಡಿದ್ದಾರೆ.

ನೇಪಾಳ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಮಂಗಳವಾರ ಮಧ್ಯಹ್ನಾ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ಅವರ ಸಹಾಯಕ ಪ್ರಕಾಶ್ ಸಿಲ್ವಾಲ್ ದೃಢಪಡಿಸಿದ್ದಾರೆ.

ನೇಪಾಳದಲ್ಲಿ ಸಾಮಾಜಿಕ ಮಾಧ್ಯಮಗಳ ಮೇಲಿನ ನಿಷೇಧವನ್ನು ತೆರವುಗೊಳಿಸಿದರೂ ಪ್ರತಿಭಟನೆ ಮುಂದುವರಿದಿತ್ತು. ಓಲಿ ಅವರ ರಾಜೀನಾಮೆಗೆ ಪ್ರತಿಭಟನಾಕಾರರು ಒತ್ತಾಯಿಸಿದ್ದರು.

ಸರ್ಕಾರವು ಸಾಮಾಜಿಕ ಮಾಧ್ಯಮ ವೇದಿಕೆಗಳ ಮೇಲೆ ವಿಧಿಸಿದ್ದ ನಿಷೇಧವನ್ನು ಹಿಂಪಡೆಯಲಾಗಿದೆ ಎಂದು ಘೋಷಿಸಿದ್ದರೂ, ಪ್ರತಿಭಟನೆಗಳು ಎರಡನೇ ದಿನವೂ ತೀವ್ರವಾಗಿ ನಡೆಯುತ್ತಿವೆ.

ಸೋಮವಾರದ ಪ್ರತಿಭಟನೆಗಳಲ್ಲಿ 20 ಮಂದಿ ಸಾವನ್ನಪ್ಪಿ, 250 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು.

ರಾಜೀನಾಮೆ ನೀಡುವ ಕೆಲವೇ ಗಂಟೆಗಳ ಮೊದಲು ಪ್ರತಿಭಟನಾಕಾರರು ಶಾಂತಿ ಕಾಯ್ದುಕೊಳ್ಳುವಂತೆ ಮತ್ತು ಸಂಯಮದಿಂದ ವರ್ತಿಸುವಂತೆ ಓಲಿ ಮನವಿ ಮಾಡಿದ್ದರು. ಸಂವಾದದ ಮೂಲಕ ಪರಿಹಾರಗಳನ್ನು ಕಂಡುಕೊಳ್ಳುವಂತೆ ಕರೆ ನೀಡಿದ್ದರು. ಬಿಕ್ಕಟ್ಟನ್ನು ಪರಿಹರಿಸಲು ಸಂಜೆ 6 ಗಂಟೆಗೆ ಸರ್ವಪಕ್ಷ ಸಭೆಯನ್ನು ಕೂಡ ನಿಗದಿಪಡಿಸಿದ್ದರು.

ಸೇನಾ ಮೂಲಗಳ ಪ್ರಕಾರ, ಓಲಿ ಅವರು ನೇಪಾಳ ಸೇನಾ ಮುಖ್ಯಸ್ಥ ಜನರಲ್ ಅಶೋಕ್ ರಾಜ್ ಸಿಗ್ಡೆಲ್ ಅವರೊಂದಿಗೆ ಮಾತುಕತೆ ನಡೆಸಿದ್ದು, ಪರಿಸ್ಥಿತಿ ಹದಗೆಡುತ್ತಿರುವುದನ್ನು ನಿಯಂತ್ರಿಸಲು ಮತ್ತು ಪ್ರಧಾನಿ ನಿವಾಸದಿಂದ ಸುರಕ್ಷಿತವಾಗಿ ಹೊರಬರಲು ಮಿಲಿಟರಿ ಸಹಾಯವನ್ನು ಕೋರಿದ್ದರು. ಈ ವೇಳೆ ಸೇನಾ ಮುಖ್ಯಸ್ಥರು ಅವರಿಗೆ ರಾಜೀನಾಮೆ ನೀಡುವಂತೆ ಸೂಚಿಸಿದ್ದರು ಎಂದು ವರದಿಯಾಗಿದೆ.

# ಡಾ.ಶಶಿಕಾಂತ ಉಡಿಕೇರಿ ಗುವಿವಿ ನೂತನ ಕುಲಪತಿ



**ಕಲಬುರಗಿ,ಸೆ.9–**ಗುಲ್ಬರ್ಗಾ ವಿಶ್ವವಿದ್ಯಾಲಯದ ನೂತನ ಕುಲಪತಿಯಾಗಿ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದ ಡಾ.ಶಶಿಕಾಂತ ಎಸ್.ಉಡಿಕೇರಿ ಅವರನ್ನು ನೇಮಕ ಮಾಡಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಸೋಮವಾರ ಆದೇಶ ಹೊರಡಿಸಿದ್ದಾರೆ.

ಈ ಮೂಲಕ ಬರೋಬ್ಬರಿ 8 ತಿಂಗಳ ಬಳಿಕ ವಿವಿಗೆ ಖಾಯಂ ಕುಲಪತಿ ನೇಮಕ ಮಾಡಿದಂತಾಗಿದೆ.

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಉಡಿಕೇರಿ ಗ್ರಾಮದವರಾದ ಡಾ.ಶಶಿಕಾಂತ ಅವರು ಕೆಲ ಕಾಲ ಬಳ್ಳಾರಿ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾಗಿ ಕೆಲಸ ಮಾಡಿದ್ದರು. ಈ ಹಿಂದೆ ಕುಲಪತಿಯಾಗಿದ್ದ ಪ್ರೋ.ದಯಾನಂದ ಅಗಸರ ಅವರ ಅಧಿಕಾರವಧಿ ಜನವರಿಯಲ್ಲಿ ಮುಗಿದಿತ್ತು. ಇದಾದ ಬಳಿಕ ಪ್ರೋ.ಗುರು ಶ್ರೀರಾಮುಲು, ಪ್ರೋ.ಹೂವಿನಬಾವಿ ಬಾಬಣ್ಣ, ಪ್ರೋ.ಅಬ್ದುಲ್ ರಬ್ ಉಸ್ತಾದ್ ಅವರು ಪ್ರಭಾರ ಕುಲಪತಿಯಾಗಿ ಕಾರ್ಯ ನಿರ್ವಹಿಸಿದ್ದರು. ಇದೀಗ 8 ತಿಂಗಳ ಬಳಿಕ ಖಾಯಂ ಕುಲಪತಿಗಳಾಗಿ ನೇಮಕವಾಗಿರುವ ಡಾ.ಶಶಿಕಾಂತ ಉಡಿಕೇರಿ ಅವರ ಅಧಿಕಾರವಧಿ ಮುಂದಿನ ನಾಲ್ಕು ವರ್ಷಗಳ ಕಾಲ ಇರಲಿದೆ.

# ನನಗೆ ವಿಷ ಕೊಡಿ: ನಟ ದರ್ಶನ್ ಅಳಲು



**ಬೆಂಗಳೂರು,ಸೆ.9–**ನನಗೆ ವಿಷ ಕೊಡಿ ಎಂದು ನಟ ದರ್ಶನ್ ನ್ಯಾಯಾಧೀಶರಿಗೆ ಅಲವತ್ತುಕೊಂಡಿರುವ ಪ್ರಸಂಗ ಇಂದು ನಡೆದಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿ ಬೆಂಗಳೂರಿನ ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿರುವ ನಟ ದರ್ಶನ್ ಜೈಲಿನಲ್ಲಿ ಯಾವುದೇ ಸವಲತ್ತು ಸಿಗುತ್ತಿಲ್ಲ. ಬಿಸಿಲಿಗೆ ಹೋಗದೆ ಒಂದು ತಿಂಗಳಾಗಿದೆ. ಕೈಗೆಲ್ಲ ಫಂಗಸ್ ಬಂದಿದೆ. ದಯವಿಟ್ಟು ನನಗೆ ಸ್ವಲ್ಪ ವಿಷ ಕೊಡಿ ಎಂದು ಬೆಂಗಳೂರಿನ 57ನೇ ಸಿಸಿಹೆಚ್ ನ್ಯಾಯಾಲಯದ ನ್ಯಾಯಾಧೀಶರ ಮುಂದೆ ಬೇಡಿಕೊಂಡರು.

ರೇಣುಕಾಸ್ವಾಮಿ ಬರ್ಬರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಆದೇಶದ ಮೇರೆಗೆ ಮತ್ತೆ ಜೈಲು ಸೇರಿರುವ ದರ್ಶನ್ ತೂಗುದೀಪ ಹೆಚ್ಚುವರಿ ದಿಂಬು, ಬೆಡ್ ಶೀಟ್ ಗೆ ಅರ್ಜಿ ಸಲ್ಲಿಸಿದ್ದರು.

ನಗರದ 57ನೇ ಸಿಸಿಎಚ್ ನ್ಯಾಯಾಲಯದಲ್ಲಿ ಅರ್ಜಿ ವಿಚಾರಣೆ ನಡೆಯುತ್ತಿದ್ದ ಸಂದರ್ಭದಲ್ಲಿ ನಟ ದರ್ಶನ್ ಕೈಎತ್ತಿ ನನ್ನದೊಂದು ಮನವಿ ಇದೆ ಎಂದು ಕೇಳಿಕೊಂಡರು. ಅದಕ್ಕೆ ಅವಕಾಶ ಕೊಟ್ಟಾಗ, "ನನಗೆ ಸ್ವಲ್ಪ ವಿಷವನ್ನು ನೀಡುವಂತೆ ಕೋರ್ಟ್ ನಿಂದಲೇ ಆದೇಶಿಸಬೇಕು" ಎಂದು ವಿಚಿತ್ರ ಬೇಡಿಕೆಯನ್ನು ಮುಂದಿಟ್ಟರು.

ನಾನು ಬಿಸಿಲನ್ನು ನೋಡಿ 30 ದಿನಗಳಾಗಿವೆ. ನನ್ನ ಕೈ ಎಲ್ಲ ಫಂಗಸ್ ಬಂದಿದೆ. ನನ್ನ ಜೊತೆಗಿರುವ ಬೇರೆ ಯಾರಿಗೂ ಬೇಡ, ನನಗೆ ಮಾತ್ರ ವಿಷವನ್ನು ನೀಡಲಿ. ಕೋರ್ಟ್ ನಿಂದಲೇ ಈ ಆದೇಶ ನೀಡಬೇಕೆಂದು" ದರ್ಶನ್ ಮನವಿ ಮಾಡಿಕೊಂಡರು.

ವಿಚಾರಣೆಯ ಸಂದರ್ಭದಲ್ಲಿ ದರ್ಶನ್ ತೂಗುದೀಪ ಇಟ್ಟ ವಿಚಿತ್ರ ಬೇಡಿಕೆ ನ್ಯಾಯಾಧೀಶರನ್ನು ಒಂದು ಕ್ಷಣಕ್ಕೆ ಅಚ್ಚರಿ ಉಂಟು ಮಾಡುವಂತಿತ್ತು. ಆರೋಪಿ ಮನವಿಗೆ ಪ್ರತಿಕ್ರಿಯೆ ನೀಡಿದ ನ್ಯಾಯಾಧೀಶರು "ಹಾಗೆಲ್ಲಾ ನೀವು ಕೇಳುವಂತಿಲ್ಲ. ಜೈಲು ಅಧಿಕಾರಿಗಳಿಗೆ ಯಾವ ಆದೇಶ ನೀಡಬೇಕೋ ನೀಡುತ್ತೇವೆ. ನಿಮ್ಮ ಮನವಿ ಬಗ್ಗೆ ಮಧ್ಯಾಹ್ನ ಆದೇಶ ನೀಡುತ್ತೇವೆ ಎಂದು ಉತ್ತರಿಸಿದರು.

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್ ಬಂಧನ ಆಗಿತ್ತು. ನ್ಯಾಯಾಲಯದಲ್ಲಿ ದರ್ಶನ್ ಹಾಗೂ ಇತರರಿಗೆ ಜಾಮೀನು ಸಿಕ್ಕಿತ್ತು. ಆದರೆ ಸುಪ್ರೀಂ ಕೋರ್ಟ್ ನಲ್ಲಿ ಜಾಮೀನು ರದ್ದಾಗಿತ್ತು. ರೇಣುಕಾಸ್ವಾಮಿ ನಟಿ ಪವಿತ್ರಾ ಗೌಡಗೆ ಅಶ್ಲೀಲ ಸಂದೇಶ ಕಳಿಸಿದ್ದು ಎಂಬ ಕಾರಣಕ್ಕಾಗಿ ನಟ ದರ್ಶನ್ ಹಾಗೂ ತಂಡ ರೇಣುಕಾಸ್ವಾಮಿಯನ್ನು ಅಪಹರಣ ಮಾಡಿ ಬೆಂಗಳೂರಿನ ಪಟ್ಟಣಗೆರೆ ಶೆಟ್ ನಲ್ಲಿ ಚಿತ್ರ ಹಿಂಸೆ ನೀಡಿ ಹತ್ಯೆ ಮಾಡಿದ್ದರು. ಈ ಘಟನೆ ವ್ಯಾಪಕ ಖಂಡನೆಗೆ ಕಾರಣವಾಗಿತ್ತು.

ನಟ ದರ್ಶನ್ ಹಾಗೂ ಇತರ ಆರೋಪಿಗಳಿಗೆ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ 2024 ಡಿಸೆಂಬರ್ ತಿಂಗಳಲ್ಲಿ ಜಾಮೀನು ನೀಡಿತ್ತು. ಆದರೆ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಬೆಂಗಳೂರು ನಗರ ಪೊಲೀಸ್ ಸುಪ್ರೀಂ ಕೋರ್ಟ್ ಕದ ತಟ್ಟಿದ್ದರು. ಅರ್ಜಿ ವಿಚಾರಣೆಯನ್ನು ನಡೆಸಿದ್ದ ಸುಪ್ರೀಂ ಕೋರ್ಟ್ ಹೈಕೋರ್ಟ್ ಜಾಮೀನು ನೀಡಿದ ನಡೆಯನ್ನು ತರಾಟೆಗೆ ತೆಗೆದುಕೊಂಡು ವಜಾ ಮಾಡಿತ್ತು.

ಅಲ್ಲಿಂದ ಪರಪ್ಪನ ಅಗ್ರಹಾರ ಜೈಲು ಸೇರಿರುವ ದರ್ಶನ್ ಗೆ ಸೆಲ್ ನಿಂದ ಹೊರಗೆ ಬರಲು ಅವಕಾಶ ಇಲ್ಲ. ಹೀಗಾಗಿ ಸೆಲ್ ಒಳಗೆ ವಾಕಿಂಗ್ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಳೆದ 1 ತಿಂಗಳಿಂದ ಪರಪ್ಪನ ಅಗ್ರಹಾರ ಜೈಲಿನಲ್ಲಿ ದರ್ಶನ್ ನ್ಯಾಯಾಂಗ ಬಂಧನದಲ್ಲಿದ್ದಾರೆ.

# ಮತದಾರರ ಪಟ್ಟಿ ಪರಿಷ್ಕರಣೆಗೆ ಆಧಾರ್ ಪರಿಗಣನೆ ಕುರಿತ ಸುಪ್ರಿಂ ತೀರ್ಪು ಸ್ವಾಗತಾರ್ಹ : ಡಿಕೆಶಿ



**ಕೊಯಂಬತ್ತೂರು, ಸೆ.9–** ಮತದಾರರ ಪಟ್ಟಿ ಪರಿಷ್ಕರಣೆಗೆ ಆಧಾರ್ ಕಾರ್ಡ್ ಅನ್ನು ಮೂಲಭೂತ ದಾಖಲೆ ಎಂದು ಪರಿಗಣಿಸುವಂತೆ ಸುಪ್ರಿಂಕೋರ್ಟ್ ನೀಡಿರುವ ತೀರ್ಪು ಸ್ವಾಗತಾರ್ಹ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.ತಮಿಳುನಾಡಿನ ವಿಮಾನ ನಿಲ್ದಾಣಕ್ಕೆ ಬಂದಿಳಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಹಿಂದೆ ಯುಪಿಎ ಸರ್ಕಾರ ರೂಪಿಸಿದ್ದ ಆಧಾರ್ ಕಾರ್ಡ್ ಭಾರತೀಯ ಪೌರತ್ವ ಗುರುತಿಗೆ ಬಳಸುವ ಪ್ರಮುಖ ದಾಖಲೆಯಾಗಿದೆ. ದೇಶದ ಪ್ರತಿಯೊಬ್ಬ ಪ್ರಜೆಗೂ ಅದು ಮೂಲಾಧಾರ ಎಂದರು.

ಬಿಹಾರದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಆಧಾರ್ ಕಾರ್ಡ್ ಅನ್ನು ಪೌರತ್ವ ದಾಖಲೆ ಎಂದು ಪರಿಗಣಿಸಬೇಕು ಎಂದು ಸುಪ್ರಿಂಕೋರ್ಟ್ ಚುನಾವಣಾ ಆಯೋಗಕ್ಕೆ ಸೂಚನೆ ನೀಡಿರುವುದು ಸ್ವಾಗರ್ಹ ಎಂದರು.

ಉಪರಾಷ್ಟ್ರಪತಿ ಚುನಾವಣೆಯಲ್ಲಿ ಇಂಡಿಯಾ ರಾಜಕೀಯ ಕೂಟ ಪ್ರಜಾಪ್ರಭುತ್ವದ ಆಶಯಕ್ಕನುಗುಣವಾಗಿ ಸ್ಪರ್ಧೆ ಮಾಡಿದೆ. ಇಂಡಿಯಾ ಬ್ಲಾಕ್ ನೇತೃತ್ವದಲ್ಲಿ ವಿರೋಧ ಪಕ್ಷಗಳೆಲ್ಲಾ ಒಟ್ಟಾಗಿ ಸ್ಪರ್ಧೆ ಮಾಡಿವೆ. ಎಲ್ಲರಿಗೂ ಆತಸಾಕ್ಷಿಯ ಮತ ಹಾಕುವಂತೆ ಮನವಿ ಮಾಡಿದ್ದೇವೆ ಎಂದರು.ಉಪರಾಷ್ಟ್ರಪತಿ ಚುನಾವಣೆಯಲ್ಲಿ ಅಡ್ಡಮತದಾನವಾಗುವ ಸಾಧ್ಯತೆಗಳ ಬಗ್ಗೆ ತಾವು ಪ್ರತಿಕ್ರಿಯಿಸುವುದಿಲ್ಲ ಎಂದು ಹೇಳಿದರು.

# ಉಪರಾಷ್ಟ್ರಪತಿ ಚುನಾವಣೆ: ಎನ್‌ಡಿಎ ಅಭ್ಯರ್ಥಿ ಗೆಲುವು ಖಚಿತ

**ನವದೆಹಲಿ,ಸೆ.9–** ದೇಶದ ಮುಂದಿನ ಉಪರಾಷ್ಟ್ರಪತಿ ಸ್ಥಾನಕ್ಕೆ ಬಿಗಿ ಭದ್ರತೆಯಲ್ಲಿ ಮತದಾನ ಪ್ರಗತಿಯಲ್ಲಿದ್ದು ಎನ್‌ಡಿಎ ಅಭ್ಯರ್ಥಿ ಹಾಗು ಮಹಾರಾಷ್ಟ್ರದ ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಮತ್ತು ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ನ್ಯಾಯಮೂರ್ತಿ ಬಿ, ಸುದರ್ಶನ್ ರೆಡ್ಡಿ ನಡುವೆ ಪೈಪೋಟಿ ನಡೆಸಿದ್ದು ಸಿಪಿ ರಾಧಾಕೃಷ್ಣನ್ ಅವರ ಗೆಲುವು ಬಹುತೇಕ ಪಕ್ಕಾ ಆಗಿದ್ದು ಸಂಜೆ ವೇಳಗೆ ಅಧಿಕೃತ ಘೋಷಣೆ ಹೊರಬೀಲಿದೆ.

ಉಪರಾಷ್ಟ್ರಪತಿ ಆಗಿದ್ದ ಜಗದೀಪ್ ಧನ್‌ಕರ್ ಅವರ ದಿಢೀರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ದೆಹಲಿಯ ಸಂಸತ್ ಭವನದಲ್ಲಿ ಮತದಾನ ನಡೆದಿದೆ. ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತದಾನ ಮಾಡಿದರು, ನಂತರ ಒಬ್ಬೊಬ್ಬರೇ ಕೇಂದ್ರ ಸಚಿವರು, ಸಂಸದರು ಮತ್ತು ರಾಜ್ಯಸಭೆಯ ಸದಸ್ಯರು ಮತದಾನ ಮಾಡಿದರು. ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ ಅವರು ವೀಲ್ ಚೇರ್ ನಲ್ಲಿ ಆಗಮಿಸಿ ಮತದಾನ ಮಾಡಿದರು.

ಕಾಂಗ್ರೆಸ್ ಅಧ್ಯಕ್ಷ ಹಾಗು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಮಂಡಳಿ ಅಧ್ಯಕ್ಷೆ ಸೋನಿಯಾ ಗಾಂಧಿ, ಲೋಕಸಭೆ ವಿರೋದ ಪಕ್ಷದ ನಾಯಕ ರಾಹುಲ್ ಗಾಂಧಿ, ಬಿಜೆಪಿ ಅಧ್ಯಕ್ಷೆ ಜೆಪಿ ನಡ್ಡಾ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವರು ಮತದಾನ ಮಾಡಿದರು

ಮತದಾನಕ್ಕೆ ಸಂಜೆ 5 ಗಂಟೆಯ ತನಕ ಅವಕಾಶ ಮಾಡಿಕೊಡಲಾಗಿದ್ದು 5ಗಂಟೆಯ ನಂತರ ಮತ ಎಣಿಕೆ ಪ್ರಕ್ರಿಯೆ ಆರಂಭವಾಗಲಿದೆ. ಅಂಕಿ ಸಂಖ್ಯೆಯ ಪ್ರಕಾರ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಬಿ, ಸುದರ್ಶನ ರೆಡ್ಡಿ ಅವರಿಗೆ ಹೋಲಿಸಿದರೆ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರ ಗೆಲುವು ಬಹುತೇಕ ಖಚಿತವಾಗಿದ್ದು ಅಧಿಕೃತ ಘೋಷಣೆಯೊಂದೇ ಬಾಕಿ ಉಳಿದಿದೆ.ಉಪರಾಷ್ಟ್ರಪತಿ ಚುನಾವಣೆಯ ಚುನಾವಣಾ ಕಾಲೇಜು ಒಟ್ಟು 788 ಸದಸ್ಯರನ್ನು ಒಳಗೊಂಡಿದೆ.ರಾಜ್ಯಸಭೆಯಿಂದ 245 ಮತ್ತು ಲೋಕಸಭೆಯಿಂದ 543. ರಾಜ್ಯಸಭೆಯ 12 ನಾಮನಿರ್ದೇಶಿತ ಸದಸ್ಯರು ಸಹ ಚುನಾವಣೆಯಲ್ಲಿ ಮತ ಚಲಾಯಿಸಲು ಅರ್ಹರಾಗಿದ್ದಾರೆ.

ಉಪರಾಷ್ಟ್ರಪತಿ ಚುನಾವಣೆಯಲ್ಲಿ ಗೆಲುವಿನ ಮ್ಯಾಜಿಕ್ ಸಂಖ್ಯೆ 391 ಆಗಿದೆ. ಸದ್ಯ ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ ಎನ್ ಡಿಎ ಮೈತ್ರಿಕೂಟದ ಸದಸ್ಯರ ಸಂಖ್ಯೆ 425 ಇದೆ, ಇಂಡಿಯಾ ಮೈತ್ರಿಕೂಟದ ಸದಸ್ಯರ ಸಂಖ್ಯೆ 338 ಇದೆ. ಇದರ ಜೊತೆಗೆ ಕೆಲ ಪಕ್ಷಗಳ 18 ಸಂಸದರು ಯಾವುದೇ ನಿರ್ಧಾರ ಕೈಗೊಂಡಿಲ್ಲ.

ಇದರ ಜೊತೆಗೆ ವಿವಿಧ ಪಕ್ಷಗಳಿಂದ ಅಡ್ಡ ಮತದಾನವಾಗುವ ಸಾಧ್ಯತೆ ಇದೆ, ಹೀಗಾಗಿ ಎನ್ ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರು ಉಪರಾಷ್ಟ್ರಪತಿ ಆಗಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ.

**ಉಪರಾಷ್ಟ್ರಪತಿ: ಯಾರು ಆಯ್ಕೆ ಮಾಡುತ್ತಾರೆ**

ಲೋಕಸಭೆ ಮತ್ತು ರಾಜ್ಯಸಭೆಯ ಚುನಾಯಿತ ಸದಸ್ಯರು ಮತ್ತು ನಾಮನಿರ್ದೇಶಿತ ಸದಸ್ಯರು ಸೇರಿದಂತೆ ಸಂಸತ್ತಿನ ಎರಡೂ ಸದನಗಳ ಸದಸ್ಯರನ್ನು ಒಳಗೊಂಡಿರುವ ಚುನಾವಣಾ ಕಾಲೇಜಿನಿಂದ ಉಪರಾಷ್ಟ್ರಪತಿಯನ್ನು ಆಯ್ಕೆ ಮಾಡಲಾಗುತ್ತದೆ. ಉಪ ರಾಷ್ಟ್ರಪತಿ ಚುನಾವಣೆಯಲ್ಲಿ ರಾಜ್ಯ ವಿಧಾನಸಬೆ ಅಥವಾ ವಿಧಾನ ಪರಿಷತ್ತಿನ ಸದಸ್ಯರ ಪಾತ್ರ ಇಲ್ಲಿ ಅಗೌಣ, ಬರೀ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರು ಮಾತ್ರ ಮತದಾನ ಮಾಡುವ ಹಕ್ಕು ಹೊಂದಿದ್ದಾರೆ.

**ದೊಡ್ಡ ಗೆಲುವಿನ ವಿಶ್ವಾಸ : ಸಿಪಿ ರಾಧಾಕೃಷ್ಣನ್**

ಉಪರಾಷ್ಟ್ರಪತಿ ಚುನಾವಣೆಯಲ್ಲಿ ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದು ಎನ್‌ಡಿಎ ಅಭ್ಯರ್ಥಿ ಮತ್ತು ಮಹಾರಾಷ್ಟ್ರ ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಹೇಳಿದ್ಧಾರೆ.

ಎನ್‌ಡಿಎ ಅಭ್ಯರ್ಥಿ ಮತ್ತು ಮಹಾರಾಷ್ಟ್ರ ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಅವರು ಉಪರಾಷ್ಟ್ರಪತಿ ಚುನಾವಣೆಗೆ ಮುಂಚಿತವಾಗಿ ಇಂದು ಬೆಳಿಗ್ಗೆ ಲೋಧಿ ರಸ್ತೆ ಪ್ರದೇಶದಲ್ಲಿರುವ ರಾಮ ಮಂದಿರದಲ್ಲಿ ಪ್ರಾರ್ಥನೆ ಸಲ್ಲಿಸಿ ಆಶೀರ್ವಾದ ಪಡೆದ ಬಳಿಕ ಮಾತನಾಡಿದರು.ಉಪರಾಷ್ಟ್ರಪತಿ ಚುನಾವಣೆಗೆ ನಡೆದಿರುವ ಮತದಾನ ಭಾರತೀಯ ರಾಷ್ಟ್ರೀಯತೆಗೆ ದೊಡ್ಡ ಗೆಲುವು ಆಗಲಿದೆ. ನಾವೆಲ್ಲರೂ ಒಂದಾಗಿದ್ದೇವೆ, ನಾವೆಲ್ಲರೂ ಒಂದಾಗಿರುತ್ತೇವೆ ಮತ್ತು ಭಾರತ 'ವಿಕಸಿತ ಭಾರತ' ಗುರಿ ಸಾಧಿಸಬೇಕು ಎನ್ನುವುದು ನಮ್ಮ ಗುರಿಯಾಗಿದೆ ಎಂದಿದ್ದಾರೆ.



**ಗೆಲ್ಲುತ್ತೇವೆ: ಬಿ ಸುದರ್ಶನ್ ರೆಡ್ಡಿ**

ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶ ಬಿ ಸುದರ್ಶನ್ ರೆಡ್ಡಿ ಗೆಲ್ಲುವ ವಿಶ್ವಾಸವಿದೆ ಎಂದಿದ್ದಾರೆ.ಉಪರಾಷ್ಟ್ರಪತಿ ಚುನಾವಣೆಯಲ್ಲಿ ಗೆಲ್ಲುವ ವಿಶ್ವಾಸವಿದೆ. ನಾವು ಗೆಲ್ಲುತ್ತೇವೆ. ಜನರ ಆತ್ಮಸಾಕ್ಷಿಯನ್ನು ಜಾಗೃತಗೊಳಿಸಲು ಮಾತ್ರ ಪ್ರಯತ್ನಿಸುತ್ತಿದ್ದೇನೆ. ಅಡ್ಡ ಮತದಾನ ಇರುತ್ತದೆ ಎಂದು ನಾನು ಹೇಳಲಿಲ್ಲ. ಅಡ್ಡ ಮತದಾನ ಎಂದರೇನು ಎಂದು ನನಗೆ ತಿಳಿದಿಲ್ಲ ಎಂದಿದ್ದಾರೆ.

**ಅಡ್ಡ ಮತದಾನ ನಿರೀಕ್ಷೆ: ಸಂಜಯ್ ರಾವತ್**

ಉಪ ರಾಷ್ಟ್ರಪತಿ ಸ್ಥಾನಕ್ಕೆ ನಡೆದಿರುವ ಚುನಾವಣೆಯಲ್ಲಿ ಆಡಳಿತಾರೂಢ ಎನ್ ಡಿಎ ಮೈತ್ರಿಕೂಟದ ಹಲವು ಸದಸ್ಯರು ಅಡ್ಡ ಮತದಾನ ಮಾಡುವ ಸಾಧ್ಯತೆ ಇದೆ ಎಂದು ಶಿವಸೇನೆ ಉದ್ದವ್ ಠಾಕ್ರೆ ಬಣದ ಸಂಜಯ್ ರಾವತ್ ಹೇಳಿದ್ದಾರೆ.

ಎನ್ ಡಿಎ ಜೊತೆಗೆ ಇಂಡಿಯಾ ಮೈತ್ರಿಕೂಟದಿಂದಲೂ ಎರಡೂ ಕಡೆಯಿಂದ ಅಡ್ಡ ಮತದಾನ ಸಂಭವಿಸಬಹುದು, ಆಡಳಿತ ಪಕ್ಷಕ್ಕೆ ಅಡ್ಡ ಮತದಾನದ ಅಪಾಯವಿದೆ. ಪ್ರಧಾನಿ ನರೇಂದ್ರ ಮೋದಿ ಸರ್ಕಾರ ದುರ್ಬಲವಾಗಿದೆ," ಎಂದು ತಿಳಿಸಿದ್ದಾರೆ.

# ಸಿಯುಕೆಯಲ್ಲಿ ಒಂದು ದಿನದ ರಾಷ್ಟ್ರೀಯ ಕರ್ಮಯೋಗಿ ತರಬೇತಿ

**ಕಲಬುರಗಿ,ಸೆ.9–** ಕೇಂದ್ರ ಸರಕಾರದ ಸಂಸ್ಥೆಗಳ ಸೇವೆಗಳ ಗುಣಮಟ್ಟವನ್ನು ಹೆಚ್ಚಿಸಲು ರಾಷ್ಟ್ರೀಯ ಕರ್ಮಯೋಗಿ ತರಬೇತಿ ಕಾರ್ಯಗಾರವನ್ನು ಹಮ್ಮಿ ಕೊಳ್ಳಲಾಗಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿ ದ್ಯಾಲಯದ ಕುಲಪತಿ ಪ್ರೋ. ಬಟ್ಟು ಸತ್ಯನಾರಾಯಣ ಅವರು ಹೇಳಿದರು. ಅವರು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಯುಜಿಸಿ ಮತ್ತು ಸಾಮರ್ಥ್ಯ ನಿರ್ಮಾಣ ಆಯೋಗ ಸಹಯೋಗದಲ್ಲಿ ಒಂದು ದಿನದ ರಾಷ್ಟ್ರೀಯ ಕರ್ಮಯೋಗಿ ತರಬೇತಿ ಕಾರ್ಯ ಗಾರವನ್ನು ಉದ್ಘಾಟಿಸಿಮಾತನಾಡಿದರು. ಅವರು ಮುಂದುವರಿದು ಮಾತನಾಡಿ "ನಾವೆಲ್ಲರೂ ವಿಶ್ವವಿ ದ್ಯಾಲಯದ ಮಾಲಿಕತ್ವವನ್ನು ವಹಿಸಿಕೊಳ್ಳಬೇಕು ಹಾಗೂ ಜವಾಬ್ದಾರಿ ಮತ್ತು ಶ್ರದ್ಧೆ ಯಿಂದ ಕಾಯ ರ್ನಿರ್ವಹಿಸಬೇಕು. ಹಾಗಾದರೆ ಮಾತ್ರ ವಿಶ್ವವಿದ್ಯಾಲ ಯವನ್ನು ಉನ್ನತ ಮಟ್ಟಕ್ಕೆ ಒಯ್ಯಲು ಸಾಧ್ಯ. ಗುಣಾ ತ್ಮಕ ಶಿಕ್ಷಣ ನೀಡಲು ನಾವು ಫಲಿತಾಂಶ ಆಧಾರಿತ ಪಠ್ಯಕ್ರಮ, ಬೋಧನೆ ಮತ್ತು ಪರೀಕ್ಷೆಗಳ ವ್ಯವಸ್ಥೆಯನ್ನ ಅಳವಡಿಸಿಕೊಳ್ಳಬೇಕು. ಹಾಗೂ ಅಷ್ಟೇ ಶ್ರದ್ಧೆಯಿಂದ ಬೋಧನೆ ಮಾಡುವ ಮೂಲಕ ಗುಣ ಮಟ್ಟದ ಶಿಕ್ಷಣವನ್ನು ನೀಡಬೇಕು" ಎಂದು ಅವರು ಹೇಳಿದರು.ಈ ಸಂದರ್ಭದಲ್ಲಿ ಕುಲಸಚಿವ ಪ್ರೋ. ಆರ್ ಆರ್ ಬಿರಾದಾರ್ ಮಾತನಾಡಿ ಇದು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು ಗುಣಮಟ್ಟದ ಸೇವೆಯನ್ನು ನೀಡಲು ನಾವು ಸೇವೆ ನೀಡುವ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕಾದ ಅವಶ್ಯಕತೆ ಇದೆ. ವಿಕಸಿತ ಭಾರತವನ್ನು ಸಾಧಿಸಲು ನಾವು ನಿಯಮ ಆಧಾರಿತ ಸೇವೆಗಿ ಂತ ಜವಾಬ್ದಾರಿ ಆಧಾರಿತ ಸೇವೆಯ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.ಈ ಸಂದರ್ಭದಲ್ಲಿ ಕಾರ್ಯಕ್ರಮದ ಸಂಯೊ ೀಜಕ ಡಾ. ರವೀಂದ್ರನಾಥ ಪಂಡಿತ್ ಕಾರ್ಯ ಕ್ರಮ ನಿರೂಪಿಸಿದರು, ತರಬೇತಿದಾರ ಪ್ರೊ. ಸಂದೀಪ್ ರಣಭೀರಕರ್ ಸ್ವಾಗತಿಸಿದರು, ಮು ಖ್ಯ ತರಬೇತಿದಾರ ಡಾ. ಪಿ ಎಸ್ ಕಟ್ಟಿಮನಿ ಪ್ರಸ್ತಾವಿಕವಾಗಿ ಮಾತನಾಡಿದರು, ಡಾ. ಶೇಖ ಅಜರುದ್ದೀನ್ ವಂದಿಸಿದರು. ವಿಭಾಗಗಳ ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಜರಿದ್ದರು.

# ಚಿಟಗುಪ್ಪಾ ಆಸ್ಪತ್ರೆ ಸುಧಾರಣೆಗೆ ಮನವಿ

**ಚಿಟಗುಪ್ಪಾ, ಸೆ.9–**ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಅವ್ಯವಸ್ಥೆಯ ಕುರಿತು ಕನ್ನಡ ಸೈನೆ ಪದಾಧಿಕಾರಿಗಳಿಂದ ತಾಲೂಕ ಪಂಚಾಯತ್ ಇ ಓ ಲಕ್ಷ್ಮಿ ಬಿರಾದರ್ ಅವರಿಗೆ ಆಸ್ಪತ್ರೆ ಅವ್ಯವಸ್ಥೆ ಕುರಿತು ಮನವಿ ಸಲ್ಲಿಸಿದರು. ಚಿಟಗುಪ್ಪಾ ತಾಲೂಕ ಕೇಂದ್ರವಾಗಿದ್ದು ಸುತ್ತಮುತ್ತಲಿನ ಹಳ್ಳಿ ಜನರು ಅರೋಗ್ಯ ತಪಾಸಣೆ ಮಾಡಿಸಿಕೊಳಲು ಬರುತ್ತಾರೆ. ಆದರೆ ಆರೋಗ್ಯ ಕೇಂದ್ರದಲ್ಲಿ ವ್ಯವಸ್ಥೆ ಸರಿ ಇಲ್ಲ. ಇಲ್ಲಿನ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಬಾರದೆ ಕಾಲಹರಣ ಮಾಡುತಾರೆ.

ರಾತ್ರಿ ವೇಳೆಯಲ್ಲಿ ಅನಾರೋಗ್ಯದಿಂದ ಬಂದ ರೋಗಿಗಳೂನ್ನು ಚಿಕಿತ್ಸೆ ಕೊಡಲು ಸಿಬ್ಬಂದಿ ಲಭ್ಯವಿರುವುದಿಲ್ಲ ಎಂಬ ಆರೋಪವಿದೆ. ಆರೋಗ್ಯದಲ್ಲಿ ಸ್ವಲ್ಪವು ಏರುಪೇರಾದರೂ ಜಿಲ್ಲಾ ಆಸ್ಪತ್ರೆಗೆ ಶಿಫಾರಸು ಮಾಡುತ್ತಾರೆ. ಮಾತ್ರೆಗಳು ಖಾಸಗಿ ಮೆಡಿಕಲ್ ನಲ್ಲಿ ತರಲು ಹೇ ಳುತಾರೆ ಎಂದು ದೂರಿನಲ್ಲಿ ತಿಳಿಸಿರುತ್ತಾರ. ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಬರುವುದಿಲ್ಲ. ಸಂಜೆ ವೇಳೆಗೆ ಸಿಬ್ಬಂದಿಗಳು ಬೇಗ ಆಸ್ಪತ್ರೆಯಿಂದ ಹೋಗುತ್ತಾರೆ. ಆಸ್ಪತ್ರೆಯಲ್ಲಿ ಸೂಕ್ತ ವ್ಯವಸ್ಥೆ ಕೂಡ ಇಲ್ಲಾ ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗೆ. ಚಿಕಿತ್ಸೆ ಉಪಕರಣಗಳು ಆಸ್ಪತ್ರೆಯಲ್ಲಿ ಲಭ್ಯವಿರುವುದಿಲ್ಲ. ತಾಲೂಕು ಕೇಂದ್ರವಾದ ಈ ಆಸ್ಪತ್ರೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಿಕೊಟ್ಟು ಸಾರ್ವಜನಿಕರಿಗೆ ಅನುಕೂಲ ಮಾಡುವಂತೆ ಮನವಿ ಮಾಡಿದ್ದಾರೆ. ನಮ್ಮ ಮನವಿಗೆ ಸ್ಪಂದಿಸದೆ ಇದ್ದಲ್ಲಿ ಕನ್ನಡ ಸೇನೆ ಕರ್ನಾಟಕ ವತಿಯಿಂದ ಉಗ್ರ ಹೋರಾಟ ಮಾಡಲಾಗುವುದೆಂದು.

ತಾಲೂಕ ಪಂಚಾಯತ್ ಇ. ಓ. ಅವರಿಗೆ ಕೊಟ್ಟ ಮನವಿ ಪತ್ರದಲ್ಲಿ ತಿಳಿಸಿದ್ದಾರೆ ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ರವಿ ಸ್ವಾಮಿ. ಸುಭಾಷ್ ಕೆ ನಾರೆ ಜಿಲ್ಲಾಧ್ಯಕ್ಷರು. ಪವನ್ ಪೂಜಾರಿ ತಾಲೂಕ ಅಧ್ಯಕ್ಷರು ಚಿಟಗುಪ್ಪಾ. ತಾಲೂಕ ಉಪಾಧ್ಯಕ್ಷರು ನಾಗರಾಜ್ ಹುಡುಗಿ, ಸಲೀಂ ಬೆಳಕೇರಾ, ಸತೀಶ್ ಗಂಜಿ, ಕಲ್ಲಪ್ಪ,ಹಮೀದ್ ಮಿಯಾ,ಉಮೇಶ್ ಧೂಳೆ ಇದ್ದರು.

ಯುವ ಮಾರ್ಗ



## ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ: ನಾನಾ ಸ್ಪರ್ಧೆಗಳು

**ರಾಯಚೂರು,ಸೆ.9–** ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ಸೆಪ್ಟೆಂಬರ್ 15 ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸುವ ಅಂಗವಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರ ಮಹತ್ವದ ಕುರಿತು ಚರ್ಚಾ ಸ್ಪರ್ಧೆ, ಚಿತ್ರಕಲೆ ಮತ್ತು ಛಾಯಾಚಿತ್ರಗಳ ಮೂಲಕ ಮತದಾನದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿಯ ಉಪ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843042, ರಾಯಚೂರು ಗ್ರೇಡ್–1 ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843184, ಮಾನ್ವಿ ಗ್ರೇಡ್–1 ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843183, ಲಿಂಗಸುಗೂರು ಗ್ರೇಡ್–1 ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843182, ದೇವದುರ್ಗ ಗ್ರೇಡ್–2 ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843181, ಸಿಂಧನೂರು ಗ್ರೇಡ್–2 ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843185ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.18 ರಂದು ಆಲ್ಕೋಡದಲ್ಲಿ ಕಂದಾಯ ಅದಾಲತ್



ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.9–** ತಾಲೂಕಿನ ಆಲ್ಕೋಡ ಗ್ರಾಮದ ಗ್ರಾಮ ಪಂಚಾಯತಿ ಆವರಣದಲ್ಲಿ ಕಂದಾಯ ಮತ್ತು ಪಿಂಚಣ ಅದಾಲತ್ ಕಾರ್ಯಕ್ರಮವನ್ನು ಸೆ.18 ರಂದು ಹಮ್ಮಿಕೊಳ್ಳಲಾಗಿದೆ ಎಂದು ತಹಸೀಲ್ದಾರ್ ಅಮರೇಶ ಬೀರಾದರ ಹೇಳಿದರು.

ಪಟ್ಟಣದ ತಹಸೀಲ್ ಕಚೇರಿಯಲ್ಲಿ ಸುದ್ದಿಗಾರರಿಗೆ ಮಂಗಳವಾರ ಮಾಹಿತಿ ನೀಡಿದ ಅವರು, ಕಂದಾಯ ಅದಾಲತ್ ನಲ್ಲಿ ಪೋತಿವಿರಾಸತ್ ಸೇರಿದಂತೆ ಪಹಣ ಗೆ ಸಂಬಂಧಿಸಿದ ಸೇವೆಗಳನ್ನು ನೀಡಲಾಗುವುದು. ಪಿಂಚಣ ಅದಾಲತ್ ನಲ್ಲಿ ಬಡತನ ರೇಖೆಗಿಂತ ಕಡಿಮೆ ಇರುವ, ನಿರ್ಗತಿಕ, ಅಸಹಾಯಕರ ಸಾಮಾಜಿಕ ಭದ್ರತೆಗಾಗಿ ವಿವಿಧ ಪಿಂಚಣ  ಯೋಜನೆಗಳಿಗೆ ಅರ್ಹರು ಯೋಜನೆ ಸೌಲಭ್ಯವನ್ನು ಪಡೆಯಬಹುದು ಎಂದರು.

ಆಧಾರ್ ಕಾರ್ಡ್, ರೇಷನ್ ಕಾರ್ಡ್ ಸೇರಿದಂತೆ ಪೂರಕ ದಾಖಲೆಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸಬೇಕು. ಆಲ್ಕೋಡ ಗ್ರಾಪಂ ವ್ಯಾಪ್ತಿಯ ಆಲ್ಕೋಡ, ಅಡಕಲಗುಡ್ಡ, ಅನವಾರ, ಆಕಳಕುಂಪಿ ಗ್ರಾಮಸ್ಥರು ಅದಾಲತ್‌ನಲ್ಲಿ ಪಾಲ್ಗೊಳ್ಳಬೇಕೆಂದರು.

## ಬಿಐಟಿಎಂನಲ್ಲಿ ಬಿ.ಇ. ಪ್ರಥಮ ವರ್ಷದ ಉದ್ಘಾಟನೆ

**ಬಳ್ಳಾರಿ ,ಸೆ.09–** ಬಳ್ಳಾರಿ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್ (ಬಿಐಟಿಎಂ) ಕಾಲೇಜಿನಲ್ಲಿ ಬಿ.ಇ. ಪ್ರಥಮ ವರ್ಷದ ವಿದ್ಯಾರ್ಥಿಗಳ ಉದ್ಘಾಟನಾ ಸಮಾರಂಭ ಭವ್ಯವಾಗಿ ನೆರವೇರಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಕಿಷ್ಕಿಂಧ ವಿಶ್ವವಿದ್ಯಾಲಯದ ಕುಲಾಧಿಪತಿ ಮತ್ತು ಕಾಲೇಜಿನ ಅಧ್ಯಕ್ಷರಾದ ಡಾ. ಯಶವಂತ್ ಭೂಪಾಲ್ ಅವರು ವಿದ್ಯಾರ್ಥಿಗಳನ್ನುದ್ದೇಶಿಸಿ, “ಇಂದಿನ ಜಗತ್ತಿನ ಪ್ರಗತಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನದಿಂದ ಸಾಧ್ಯವಾಗಿದೆ. ಹಿಂದಿನ ದಿನಗಳಲ್ಲಿ ದೇಶವನ್ನು ನಿರ್ಮಿಸಲು ಸಿವಿಲ್ ಇಂಜಿನಿಯರಿಂಗ್ ಮತ್ತು ಮೆಕಾನಿಕಲ್ ಇಂಜಿನಿಯರಿಂಗ್ ಮುಖ್ಯ ಆಧಾರವಾಗಿದ್ದರೆ, ಇಂದು ಕಂಪ್ಯೂಟರ್ ಸೈನ್ಸ್ ಹಾಗೂ ಸಂಬಂಧಿತ ವಿಭಾಗಗಳು ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಅಧ್ಯಯನ (ಎಐಎಂಎಲ್) ಕ್ಷೇತ್ರದಲ್ಲಿ ಮುಂಚೂಣಿಯಲ್ಲಿವೆ. ಮುಂದಿನ ನಾಲ್ಕು ವರ್ಷಗಳಲ್ಲಿ ವಿದ್ಯಾರ್ಥಿಗಳು ಶ್ರದ್ಧೆಯಿಂದ ಅಗತ್ಯ ಕೌಶಲ್ಯಗಳನ್ನು ಪಡೆದುಕೊಂಡರೆ ಅವರ ಭವಿಷ್ಯದ ಜೀವನ ಬೆಳಕಿನಿಂದ ತುಂಬಿರುತ್ತದೆ” ಎಂದು ತಿಳಿಸಿದರು.

ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ ಅಧ್ಯಕ್ಷ ಡಾ. ಎಸ್.ಜೆ.ವಿ. ಮಹಿಪಾಲ್ ಅವರು ಮಾತನಾಡಿ  “ಉತ್ತಮ ಜ್ಞಾನ ಮತ್ತು ಸಂಸ್ಕಾರಗಳಿಂದ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಬಿಐಟಿಎಂ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಪ್ರಗತಿಗೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದೆ. ಸಾವಿರಾರು ಮಕ್ಕಳು ನಮ್ಮ ಸಂಸ್ಥೆಗಳ ಮೇಲೆ ಭರವಸೆ ಇಟ್ಟು ವಿದ್ಯಾಭ್ಯಾಸ ಮಾಡುತ್ತಿರುವುದು ಹೆಮ್ಮೆಯ ಸಂಗತಿ” ಎಂದರು.

ನಿರ್ದೇಶಕ ಶ್ರೀ ವೈ.ಜೆ. ಪೃಥ್ವಿರಾಜ್ ಭೂಪಾಲ್ ಅವರು ಸಂಸ್ಥೆಯ ಪಾಠ್ಯಕ್ರಮ ಮತ್ತು ಶಿಸ್ತುಬದ್ಧ ಕ್ಯಾಂಪಸ್ ಜೀವನದ ಮಹತ್ವವನ್ನು ಪ್ರಸ್ತಾಪಿಸಿದರು. “ಬಿಐಟಿಎಂ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಪ್ಲೇಸ್‌ಮೆಂಟ್ ಅವಕಾಶಗಳು, ಶಿಸ್ತುಬದ್ಧ ವಾತಾವರಣ ಮತ್ತು ಅಗತ್ಯ ವೃತ್ತಿಪರ ಕೌಶಲ್ಯಗಳನ್ನು ಬೆಳೆಸುವ ತರಬೇತಿ ಒದಗಿಸುತ್ತದೆ. ವಿದ್ಯಾರ್ಥಿಗಳು ಈ ಅವಕಾಶಗಳನ್ನು ಸಮರ್ಥವಾಗಿ ಉಪಯೋಗಿಸಿಕೊಂಡರೆ ಜಾಗತಿಕ ಮಟ್ಟದಲ್ಲಿ ತಮ್ಮದೇ ಆದ ಗುರುತು ಮೂಡಿಸಬಹುದು” ಎಂದು ಅವರು ಹೇಳಿದರು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ : ಶಾಸಕ ಮಾನಪ್ಪ ವಜ್ಜಲ್



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.9–** ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು. ಇತ್ತೀಚೆಗೆ ಮಕ್ಕಳು ಮೊಬೈಲ್ ಗೀಳಿಗೆ ತುತ್ತಾಗುತ್ತಿದ್ದಾರೆ. ಮೊಬೈಲ್ ಮೋಹದಿಂದ ಮುಕ್ತಿಗೊಳಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದಾಗಿದೆ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ವಿಜಯಮಹಾಂತೇಶ್ವರ ಶಾಖಾಮಠದಲ್ಲಿ ಆಯೋಜಿಸಿದ್ದ 2025–26ನೇ ಸಾಲಿನ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ತಾಲೂಕು ಮಟ್ಟದ ಕ್ರೀಡಾಕೂಟ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕರು ಗುಣಮಟ್ಟದ ಪಾಠ ಮಾಡುವ ಮೂಲಕ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಬುನಾದಿ ಹಾಕಬೇಕು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಈ ಬಾರಿ ನಮ್ಮ ತಾಲೂಕಿನಲ್ಲಿ ಕಡಿಮೆ ಪ್ರಮಾಣದಲ್ಲಿ ಆಗಿದೆ. ಬರುವ ವರ್ಷ ಜಿಲ್ಲೆಗೇ ಫಲಿತಾಂಶ ಪ್ರಥಮ ಬರುವ ನಿಟ್ಟಿನಲ್ಲಿ ಶಿಕ್ಷಕ ವೃಂದ ಶ್ರಮಿಸಬೇಕು ಎಂದು ಕರೆ ನೀಡಿದರು.

ಕಲ್ಲನ್ನು ಕಟೆದು ಶಿಲಾಮೂರ್ತಿ ಮಾಡುವ ಕಲಾವಿದನಂತೆ ಮುಗ್ಧ ಮಗುವಿನಲ್ಲಿ ಜ್ಞಾನವನ್ನು ತುಂಬಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಮಹಾನ್ ವ್ಯಕ್ತಿಗಳನ್ನಾಗಿ ಮಾಡುವ ಶಿಕ್ಷಕರು ರಾಷ್ಟ್ರ ನಿರ್ಮಾಣದ ಶಿಲ್ಪಿಯಾಗಿದ್ದಾರೆ ಎಂದರು.

**ನಿವೃತ್ತ ಶಿಕ್ಷಕರಿಗೆ ಸನ್ಮಾನ :** ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ನಿವೃತ್ತಿಯಾದ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕ, ಶಿಕ್ಷಕಿಯರಿಗೆ ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ನಿವೃತ್ತಿ ಜೀವನ ಸುಖಕರವಾಗಿರಲೆಂದು ಶುಭ ಕೋರಲಾಗಿದೆ.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ಹೂನೂರು, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಗುರುಗಂಗಯ್ಯ ಗಣಾಚಾರಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸಪ್ಪ ಹಂದ್ರಾಳ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ತಾಲೂಕು ಅಧ್ಯಕ್ಷ ವೆಂಕಟೇಶ ಗುತ್ತೇದಾರ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಬಸಣ್ಣ ಮೇಟಿ, ಚನ್ನಬಸವ ಮೇಟಿ, ಹನುಮಂತಪ್ಪ ಕುಣೇಗೇರಿ, ಸರಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹಾಜಿಬಾಬು ಕಲ್ಯಾಣಿ ಸೇರಿದಂತೆ ಇತರರು ಇದ್ದರು.

## ಪತ್ರಕರ್ತರ ತರಬೇತಿಗಾಗಿ ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ –ಕರ್ನಾಟಕ ಮಾಧ್ಯಮ ಅಕಾಡೆಮಿ ಒಡಂಬಡಿಕೆ

**ಬಳ್ಳಾರಿ,ಸೆ.9–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ದೇಶದಲ್ಲಿಯೇ ಮೊದಲ ಬಾರಿಗೆ ಜಾಗತಿಕ ಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ದಿಗ್ಗಜ ಇನ್‌ಫೋಸಿಸ್‌ನ ಸ್ಪ್ರಿಂಗ್ ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಸಹಭಾಗಿತ್ವಕ್ಕಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರ ತರಬೇತಿಗಾಗಿ ಒಡಂಬಡಿಕೆ ಮಾಡಿಕೊಂಡಿದೆ.

ಪತ್ರಕರ್ತರ ಸಾಫ್ಟ್ವಿಲ್ ತರಬೇತಿಯ ಉದ್ದೇಶಕ್ಕಾಗಿ ಮಾಡಿಕೊಳ್ಳುತ್ತಿರುವ ಈ ಒಡಂಬಡಿಕೆಯು ಸಿ.ಎಸ್.ಆರ್ ಅಡಿ ಕರ್ನಾಟಕ ಮಾಧ್ಯಮ ಅಕಾಡೆಮಿ ಕೈಗೆತ್ತಿಕೊಂಡ ಮೊದಲ ಕಾರ್ಯಕ್ರಮವಾಗಿದೆ.

ಇನ್ಫೋಸಿಸ್ ಸಿಎಸ್‌ಆರ್ ಯೋಜನೆಯ “ಸ್ಪ್ರಿಂಗ್‌ಬೋರ್ಡ್” ಪ್ಲಾಟ್‌ಫಾರ್ಮ್ ಮೂಲಕ ಪತ್ರಕರ್ತರ ಡಿಜಿಟಲ್ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಮರ್ಥ್ಯ ನಿರ್ಮಾಣ ಈ ಒಡಂಬಡಿಕೆಯ ಉದ್ದೇಶವಾಗಿದೆ.

“ಇನ್‌ಫೋಸಿಸ್ ಸ್ಪ್ರೀಗ್‌ಬೋರ್ಡ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಭಾಗಿತ್ವವು ಬದಲಾಗುತ್ತಿರುವ ಹೊಸ ಮಾಧ್ಯಮಕ್ಕೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿನೂತನ ಪ್ಲಾಟ್‌ಫಾರಂ ಮಾಧ್ಯಮ ವೃತ್ತಿಪರರ ಕೌಶಲ್ಯ ಉನ್ನತೀಕರಣಕ್ಕೆ, ಅದರಲ್ಲೂ ವಿಶೇಷವಾಗಿ ಪತ್ರಕರ್ತರಿಗೆ ವೇಗವಾಗಿ ಬದಲಾಗುತ್ತಿರುವ ಸನ್ನಿವೇಶಗಳಿಗೆ ಅನುಗುಣವಾಗಿ ತಾಂತ್ರಿಕ ಪರಿಣತಿ ಹಾಗೂ ಸುದ್ದಿಯನ್ನು ಪ್ರಸ್ತುತಪಡಿಸುವ ಕೌಶಲವನ್ನು ಒದಗಿಸಲಿದೆ” ಎಂಬ ಆಶಯವನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ ಅವರು ವ್ಯಕ್ತಪಡಿಸಿದ್ದಾರೆ.

“ಇನ್‌ಫೋಸಿಸ್ ಸ್ಪ್ರೀಗ್‌ಬೋರ್ಡ್ ಶಿಕ್ಷಣ ಕುರಿತ ಸಿಎಸ್‌ಆರ್ ಕಾರ್ಯಕ್ರಮವಾಗಿದೆ. ಇಂದು ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮಾಧ್ಯಮ ಅಕಾಡೆಮಿಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದೆ. ಮಾಧ್ಯಮ ಅಕಾಡೆಮಿಗೆ ಸ್ಪ್ರಿಂಗ್‌ಬೋರ್ಡ್ ನ ಡಿಜಿಟಲ್ ವಿಷಯಗಳಿಗೆ ಪ್ರವೇಶ ಲಭಿಸಲಿದೆ ಮತ್ತು ಅವರು ಸಾಫ್ಟ್ ಸ್ಕಿಲ್ ಗಳು, ವ್ಯಕ್ತಿತ್ವ ವಿಕಾಸ ಹಾಗೂ ಕೃತಕ ಬುದ್ಧಿಮತ್ತೆ ಸೇರಿದಂತೆ ಇತ್ತೀಚಿನ ತಂತ್ರಜ್ಞಾನಗಳ ಅವಲೋಕನ ಕುರಿತ ವಿಷಯಗಳಿಂದ ಪ್ರಯೋಜನ ಪಡೆಯಬಹುದು. ಇದು ವಿಶೇಷವಾಗಿ 2ನೇ ಹಾಗೂ 3ನೇ ಹಂತದ ನಗರಗಳ ಪತ್ರಕರ್ತರಿಗೆ ಖಂಡಿತವಾಗಿಯೂ ಸಹಾಯಕವಾಗಲಿದೆ” ಎಂದು ಇನ್ಫೋಸಿಸ್ ನ ಹಿರಿಯ ಉಪಾಧ್ಯಕ್ಷ (ಇಟಿಎ) ಸತೀಶ ಬಿ.ನಂಜಪ್ಪ ಅವರು ಅಭಿಪ್ರಾಯಪಟ್ಟಿದ್ದಾರೆ.



ತರಬೇತಿ ಇನ್‌ಫೋಸಿಸ್ ಸ್ಪ್ರಿಂಗ್ ಬೋರ್ಡ್ ಕಾರ್ಯಕ್ರಮದಡಿ ಪತ್ರಕರ್ತರಿಗೆ ಮೂರು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಇದರಲ್ಲಿ ಡಿಜಿಟಲ್ ಮಾಧ್ಯಮಕ್ಕೆ ಅಗತ್ಯ ಕೌಶಲ್ಯಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗುವುದು. ಈ ವರ್ಷದಲ್ಲಿ ಒಟ್ಟು ಮೂರು ಕಾರ್ಯಕ್ರಮಗಳ ಮೂಲಕ ಒಟ್ಟು 150 ಪತ್ರಕರ್ತರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಇದರಲ್ಲಿ ವಿಶೇಷವಾಗಿ ಒಂದು ಬ್ಯಾಚ್‌ನಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಈ ತರಬೇತಿಯಲ್ಲಿ ಆದ್ಯತೆ ನೀಡಲಾಗುವುದು.

ಇನ್ಫೋಸಿಸ್ ಸಂಸ್ಥೆಯು ಪ್ಲಾಟ್‌ಫಾರ್ಮ್ ಮತ್ತು ಪರಿಣತಿ ಒದಗಿಸಲಿದೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರು ಹಾಗೂ ಶಿಕ್ಷಕರ ಭಾಗವಹಿಸುವಿಕೆ ಸಮನ್ವಯಗೊಳಿಸಲಿದೆ. ಪತ್ರಿಕೋದ್ಯಮ ಕ್ಷೇತ್ರದಲ್ಲಿ ಗುಣಮಟ್ಟದ ಸುಧಾರಣೆಯ ನಿಟ್ಟಿನಲ್ಲಿ ಇದೊಂದು ಮಹತ್ವದ ಉಪಕ್ರಮವಾಗಿದೆ. ಹೆಚ್ಚು ಪತ್ರಕರ್ತರಿಗೆ ತರಬೇತಿ ನೀಡುವ ಆಶಯದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ಮುಂದಡಿಯಿಟ್ಟಿದೆ.

ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ, ಸದಸ್ಯ ಹೆಚ್.ವಿ. ಕಿರಣ್ ಇನ್‌ಫೋಸಿಸ್ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಸತೀಶ ಬಿ. ನಂಜಪ್ಪ, ಹಿರಿಯ ಅಧಿಕಾರಿಗಳಾದ ಸಂತೋಷ್ ಅನಂತಪುರ, ಬಿಳಿಗಿರಿ ರಂಗ ಮೊದಲಾದವರು ಉಪಸ್ಥಿತರಿದ್ದರು.

## ಶಿಕ್ಷಣದಿಂದ ಮಾನವೀಯ ಮೌಲ್ಯಗಳನ್ನು ಬೆಳಿಸಿಕೊಳ್ಳಲು ಕರೆ

**ಬಳ್ಳಾರಿ,ಸೆ.09–** ಸಮಾಜದಲ್ಲಿ ಮಾನವನು ಶಿಕ್ಷಣದಿಂದ ಮಾತ್ರ ಉತ್ತಮವಾದ ಉದ್ಯೋಗ, ಭವಿಷ್ಯ, ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳಿಸಿಕೊಳ್ಳಲು ಸಾಧ್ಯ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪೂರೆ ಅವರು ಅಭಿಪ್ರಾಯಪಟ್ಟರು.

ನಗರದ ಕೋಟೆ ಪ್ರದೇಶದ ತಾಲ್ಲೂಕು ಪಂಚಾಯತ್ ಕಾರ್ಯಾಲಯದ ಸೋಮವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ದರ್ಶಿನಿ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.



## ಬಿಸಿಎಂ ಹಾಸ್ಟೇಲ್‌ಗೆ ಹೊಸ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಸೆ.9–** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿನಿಲಯಗಳಿಗೆ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ನೀಡಲಾಗುವುದು.

ಆಸಕ್ತ ವಿದ್ಯಾರ್ಥಿಗಳು, ಎಸ್‌ಹೆಚ್‌ಪಿ ತಂತ್ರಾಶದ ಮೂಲಕ ಅಕ್ಟೋಬರ್ 04ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅಕ್ಟೋಬರ್ 08ರಂದು ಹೊಸ ಅರ್ಜಿಗಳನ್ನು ತಾಲೂಕು ಕಲ್ಯಾಣ ಅಧಿಕಾರಿಗಳು ಪರಿಶೀಲನೆ ಮಾಡಲಿದ್ದಾರೆ.

ಅಕ್ಟೋಬರ್ 10ರಂದು ತಾಲ್ಲೂಕು ಸಮಿತಿಯ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಅಕ್ಟೋಬರ್ 15ರೊಳಗಾಗಿ ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ಅಂತಿಮ ದಿನಾಂಕವಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಡಿಯಾ ಸ್ಕಿಲ್ಸ್ ಕರ್ನಾಟಕ–2025 ಸ್ಪರ್ಧೆಯಲ್ಲಿ ಭಾಗಿಯಾಗಲು ಅವಕಾಶ

**ರಾಯಚೂರು,ಸೆ.9–** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಕೌಶಲ್ಯ ಹೊಂದಿರುವ ಅಭ್ಯರ್ಥಿಗಳಿಗೆ ಅತಿದೊಡ್ಡ ಜಾಗತಿಕ ವೇದಿಕೆಯಲ್ಲಿ ಕೌಶಲ್ಯ ಪ್ರದರ್ಶಿಸಲು ಸುವರ್ಣಾವಕಾಶ ಒದಗಿಸುತ್ತಿದ್ದು, ಆಸಕ್ತರು ಸೆ.30ರೊಳಗಾಗಿ ಸ್ಪರ್ಧೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಪದಕಗಳನ್ನು ಗೆಲ್ಲುವುದರ ಮೂಲಕ ಭಾರತವನ್ನು ಪ್ರತಿನಿಧಿಸಲು ಅವಕಾಶ ನೀಡುತ್ತಿದೆ. ಎರಡು ವರ್ಷಗಳಿಗೊಮ್ಮೆ ನಡೆಯುವ ಇಂಡಿಯಾ ಸ್ಕಿಲ್ಸ್ ಕರ್ನಾಟಕ–2025 (ವರ್ಲ್ಡ್ ಸ್ಕಿಲ್ಸ್) ಸ್ಪರ್ಧೆಯಲ್ಲಿ ಜಗತ್ತಿನಾದ್ಯಂತ 75 ಕ್ಕಿಂತಲೂ ಹೆಚ್ಚು ದೇಶಗಳು ಸ್ಪರ್ಧೆಯಲ್ಲಿ ಭಾಗವಹಿಸುತ್ತಿವೆ. 16 ರಿಂದ 25 ವರ್ಷದೊಳಗಿನ ಯುವಜನತೆ 63 ಕ್ಕೂ ಹೆಚ್ಚು ಕೌಶಲ್ಯದ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಅತಿದೊಡ್ಡ ವೃತ್ತಿಪರ ಶಿಕ್ಷಣ ಮತ್ತು ಕೌಶಲ್ಯ ಶ್ರೇಷ್ಠತೆಯ ಕಾರ್ಯಕ್ರಮ ಇದಾಗಿದೆ.

2026ನೇ ಸಾಲಿಗೆ ವಿಶ್ವ ಕೌಶಲ್ಯ ಸ್ಪರ್ಧೆಯು ಚೀನಾದ ಶಾಂಘೈನಲ್ಲಿ ನಡೆಯಲಿದೆ. ಕರ್ನಾಟಕ ರಾಜ್ಯದ ಯುವ ಜನತೆಯ ಜ್ಞಾನಾರ್ಜನೆಗೆ ಸೂಕ್ತ ವೇದಿಕೆ ಕಲ್ಪಿಸಲು ಹಾಗೂ ಮಾದರಿ ಕೌಶಲ್ಯಾಭರಿತ ರಾಜ್ಯವನ್ನಾಗಿಸಲು 2025–26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕೌಶಲ್ಯ ಒಲಂಪಿಕ್ಸ್ (ಇಂಡಿಯಾ ಸ್ಕಿಲ್ಸ್ ಕರ್ನಾಟಕ–2025) ಸ್ಪರ್ಧಾ ಕಾರ್ಯಕ್ರಮವನ್ನು ಜಿಲ್ಲಾ, ವಲಯ ಹಾಗೂ ರಾಜ್ಯ ಮಟ್ಟಗಳಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ.

ಸ್ಪರ್ಧೆಗೆ ನೋಂದಾಯಿಸಿಕೊಳ್ಳಲು ಲಿಂಕ್: https://www.skillindiadigital.gov.in/home ಮೂಲಕ ಸೆಪ್ಟೆಂಬರ್ 30ರೊಳಗೆ ಸ್ಪರ್ಧೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9606492216ಗೆ ಸಂಪರ್ಕ ಮಾಡಬಹುದಾಗಿದೆ. ಅಥವಾ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕಚೇರಿ ರಾಯಚೂರು ಜಿಲ್ಲೆ, ಇವರನ್ನು ಕಚೇರಿಯ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 24 ಗಂಟೆಗಳಲ್ಲಿ ಕೊಲೆ ಆರೋಪಿ ಬಂಧನ

**ಕಲಬುರಗಿ,ಸೆ.9–**ನಗರದ ಟಿಪ್ಪು ಕಾಲೇಜು ಹತ್ತಿರ ಸೆ. 6 ರಂದು ರಾತ್ರಿ ನಡೆದ ಮಾಲಗತ್ತಿ ಕ್ರಾಸ್‌ನ ಅರಾಫತ್ ಕಾಲೋನಿ ನಿವಾಸಿ, ರಿಯಲ್ ಎಸ್ಟೇಟ್ ಉದ್ಯಮಿ ಮಹ್ಮದ್ ಬಿಲಾಲ್ ಅಲಿಯಾಸ್ ಸುರೇಶ ರೆಡ್ಡಿ ಅಲಿಯಾಸ್ ಬಟ್ ಸುರೇಶ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಬ್–ಅರ್ಬನ್ ಪೊಲೀಸರು ಆರೋಪಿಯೊಬ್ಬನನ್ನು ಬಂಧಿಸಿದ್ದಾರೆ.ಕೊಲೆಯಾದ 24 ಗಂಟೆಗಳಲ್ಲಿ ನಗರದ ಇಸ್ಲಾಮಾಬಾದ ಕಾಲೋನಿಯ ಸಮೀರ್ ಅಲಿಯಾಸ್ ಟಮಾಟ ಸಮೀರ್ ತಂದೆ ನಬಿಸಾಬ ಮುಲ್ಲಾ (25) ಎಂಬಾತನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.ರಿಯಲ್ ಎಸ್ಟೇಟ್ ವ್ಯವಹಾರ ಮಾಡುತ್ತಿದ್ದ ಮಹ್ಮದ್ ಬಿಲಾಲ್ ಅಲಿಯಾಸ್ ಸುರೇಶ ರೆಡ್ಡಿ ಅಲಿಯಾಸ್ ಬಟ್ ಸುರೇಶನನ್ನು ಹಣಕಾಸಿನ ಮತ್ತು ರಿಯಲ್ ಎಸ್ಟೇಟ್ ವಿಷಯಕ್ಕೆ ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಲಾಗಿತ್ತು. ಈ ಸಂಬಂಧ ಅವರ ಪತ್ನಿ ಹಫಿಜಾ ಬೇಗಂ ಅವರು ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಸಮೀರ್ ಅಲಿಯಾಸ್ ಟಮಾಟ ಸಮೀರ್, ಎಸಿ ಸೋಹೆಲ್, ಟಿಪ್ಪು, ಬಿಸ್ಲೇರಿ ಹುಸೇನ್ ವಿರುದ್ಧ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಪ್ರಕರಣ ದಾಖಲಾಗಿತ್ತು. ಕೊಲೆ ಪ್ರಕರಣದ ಆರೋಪಿಗಳ ಪತ್ತೆಗೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್, ಸಬ್=ಅರ್ಬನ್ ಎಸಿಪಿ ಡಿ.ಜಿ.ರಾಜಣ್ಣ ಅವರ ಮಾರ್ಗದರ್ಶನದಲ್ಲಿ ಸಬ್–ಅರ್ಬನ್ ಪೊಲೀಸ್ ಠಾಣೆ ಪಿಐ ಸುಶೀಲಕುಮಾರ ನೇತೃತ್ವದಲ್ಲಿ ಪಿಎಸ್‌ಐ ಬಸವರಾಜು, ಪೊಲೀಸ್ ಸಿಬ್ಬಂದಿ ಒಳಗಗೊಂಡ ತಂಡ ರಚಿಸಲಾಗಿತ್ತು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A  Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka  Editor: ANILKUMAR H